# ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 47 RNI Number : KNKAN/25/A2770 21-02-2026 Saturday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :47 ರಾಯಚೂರು 21-02-2026 ಶನಿವಾರ ಪುಟ 04 ಬೆಲೆ ರೂ.2/- ಮೊ:8660146563


# ಟ್ರಂಪ್ ಜಾರಿಗೆ ತಂದಿದ್ದ ಸುಂಕಗಳನ್ನು ರದ್ದುಗೊಳಿಸಿದ ಸುಪ್ರೀಂಕೋರ್ಟ್: ಅಮೆರಿಕ ಅಧ್ಯಕ್ಷರಿಗೆ ಭಾರಿ ಹಿನ್ನಡೆ

ವಾಷಿಂಗ್ಟನ್ ಡಿಸಿ, ಅಮೆರಿಕ,ಫೆ.20-

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆರ್ಥಿಕ ನೀತಿಗೆ ದೊಡ್ಡ ಹೊಡೆತ ಬಿದ್ದಿದೆ. ಅಮೆರಿಕದ ಸುಪ್ರೀಂ ಕೋರ್ಟ್ ಅವರು ಜಾರಿಗೆ ತಂದಿದ್ದ ಸುಂಕದ ಕ್ರಮಗಳನ್ನು ಅಮಾನ್ಯಗೊಳಿಸಿ ಆದೇಶಿಸಿದೆ ಎಂದು ಶುಕ್ರವಾರ ದಿ ವಾಷಿಂಗ್ಟನ್ ಪೋಸ್ಟ್ ವರದಿ ಮಾಡಿದೆ.


ವಾಷಿಂಗ್ಟನ್ ಪೋಸ್ಟ್ ವರದಿ ಪ್ರಕಾರ, ಅಮೆರಿಕದ ಬಹುತೇಕ ಎಲ್ಲಾ ವ್ಯಾಪಾರ ಪಾಲುದಾರರಿಂದ ಸರಕುಗಳ ಮೇಲೆ ವ್ಯಾಪಕ ಆಮದು ಸುಂಕಗಳನ್ನು ವಿಧಿಸಲು 1977 ರ ಅಂತಾರಾಷ್ಟ್ರೀಯ ತುರ್ತು ಆರ್ಥಿಕ ಅಧಿಕಾರ ಕಾಯ್ದೆ - ಅಡಿ ಅಮೆರಿಕ ಅಧ್ಯಕ್ಷರು ಅಧಿಕಾರ ಹೊಂದಿಲ್ಲ ಎಂದು ಅಮೆರಿಕದ ಸುಪ್ರೀಂ ಕೋರ್ಟ್ ಅಭಿಪ್ರಾಯಪಟ್ಟಿದೆ.

ಈ ತೀರ್ಪು ಜಾಗತಿಕ ವ್ಯಾಪಾರ, ವ್ಯವಹಾರಗಳು, ಗ್ರಾಹಕರು, ಹಣದುಬ್ಬರ ಪ್ರವೃತ್ತಿಗಳು ಮತ್ತು ದೇಶಾದ್ಯಂತದ ಗೃಹ ಹಣಕಾಸುಗಳ ಮೇಲೆ ವ್ಯಾಪಕ ಪರಿಣಾಮಗಳನ್ನು ಬೀರುತ್ತದೆ ಎಂದು ನಿರೀಕ್ಷಿಸಲಾಗಿದೆ. ಈ ತೀರ್ಪಿನಿಂದ ದೇಶದಲ್ಲಿ ಭಾರಿ ಆರ್ಥಿಕ ಪರಿಣಾಮಗಳು ಉಂಟಾಗುವ ಸಾಧ್ಯತೆಗಳಿವೆ. ಇದು ಟ್ರಿಲಿಯನ್ ಗಟ್ಟಲೇ ವ್ಯವಹಾರವಾಗಿದ್ದು, ಇದು ದೊಡ್ಡ ಪೆಟ್ಟು ನೀಡುವ ಸಾಧ್ಯತೆಗಳಿವೆ. ಡಿಸೆಂಬರ್ 14ರವರೆಗೆ ಅಮೆರಿಕ ಸರ್ಕಾರವು ವಿವಾದಿತ ಪ್ರಾಧಿಕಾರದ ಅಡಿ ಸುಮಾರು 134 ಶತಕೋಟಿ ಡಾಲರ್‌ಗಳಷ್ಟು ಮೊತ್ತದ ಸುಂಕ ಸಂಗ್ರಹಿಸಿದೆ ಎಂದು ದಿ ವಾಷಿಂಗ್ಟನ್ ಪೋಸ್ಟ್ ವರದಿ ಮಾಡಿದೆ.

ಟ್ಯಾಕ್ಸ್ ಫೌಂಡೇಶನ್‌ನ ಅಂದಾಜಿನ ಪ್ರಕಾರ, ಟ್ರಂಪ್‌ರ ವ್ಯಾಪಾರ ಯುದ್ಧವು 2025ರಲ್ಲಿ ಅಮೆರಿಕನ್ ಕುಟುಂಬಗಳಿಗೆ ತಲಾ ಸುಮಾರು 1,100 ಡಾಲರ್‌ಗಳಷ್ಟು ನಷ್ಟವನ್ನುಂಟು ಮಾಡುತ್ತದೆ ಎಂದು ದಿ ಪೋಸ್ಟ್ ತನ್ನ ವರದಿಯಲ್ಲಿ ಹೇಳಿದೆ. ಪರಸ್ಪರ ಪ್ರಯೋಜನಕಾರಿ ವ್ಯಾಪಾರಕ್ಕೆ ಸಂಬಂಧಿಸಿದಂತೆ ಮಧ್ಯಂತರ ಒಪ್ಪಂದಕ್ಕಾಗಿ ಒಂದು ಚೌಕಟ್ಟನ್ನು ರೂಪಿಸಿದ್ದೇವೆ ಎಂದು ಅಮೆರಿಕ ಮತ್ತು ಭಾರತ ಘೋಷಿಸಿದ ಕೆಲವು ದಿನಗಳ ನಂತರ ಈ ಮಹತ್ವದ ತೀರ್ಪು ಬಂದಿದೆ.

ಫೆಬ್ರವರಿ 13, 2025 ರಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಪ್ರಾರಂಭಿಸಿದ ಭಾರತ -ಅಮೆರಿಕ ದ್ವಿಪಕ್ಷೀಯ ವ್ಯಾಪಾರ ಒಪ್ಪಂದ (ಬಿಟಿಎ) ಮಾತುಕತೆಗಳಿಗೆ ದೇಶಗಳ ಬದ್ಧತೆಯನ್ನು ಈ ಮಧ್ಯಂತರ ಒಪ್ಪಂದ ಚೌಕಟ್ಟಿನಲ್ಲಿ ಪುನರುಚ್ಚರಿಸಲಾಗಿತ್ತು.

ಯುನೈಟೆಡ್ ಸ್ಟೇಟ್ಸ್ ಮತ್ತು ಭಾರತದ ನಡುವಿನ ಮಧ್ಯಂತರ ಒಪ್ಪಂದವು ನಮ್ಮ ದೇಶಗಳ ಪಾಲುದಾರಿಕೆಯಲ್ಲಿ ಐತಿಹಾಸಿಕ ಮೈಲಿಗಲ್ಲು ಎಂದು ಬಣ್ಣಿಸಲಾಗಿತ್ತು. ಪರಸ್ಪರ ಆಸಕ್ತಿಗಳು ಮತ್ತು ಕಾಂಕ್ರೀಟ್ ಫಲಿತಾಂಶಗಳ ಆಧಾರದ ಮೇಲೆ ಪರಸ್ಪರ ಮತ್ತು ಸಮತೋಲಿತ ವ್ಯಾಪಾರಕ್ಕೆ ಸಾಮಾನ್ಯ ಬದ್ಧತೆಯನ್ನು ಪ್ರದರ್ಶಿಸುತ್ತದೆ ಎಂದು ಜಂಟಿ ಹೇಳಿಕೆಯಲ್ಲಿ ತಿಳಿಸಲಾಗಿದೆ.



### ಜಿಲ್ಲಾಡಳಿತದಿಂದ ಸರ್ವಜ್ಞ ಜಯಂತಿ ಆಚರಣೆ

# ಸಂತಕವಿ ಸರ್ವಜ್ಞ ಕನ್ನಡ ನಾಡಿನ ಸಂಪತ್ತು: ವೈ ಸುರೇಂದ್ರಬಾಬು ಕುಂಬಾರ

ರಾಯಚೂರು ಫೆ.20

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಫೆ.20ರಂದು ಸಂತ ಕವಿ ಸರ್ವಜ್ಞ ಜಯಂತಿ ಆಚರಿಸಲಾಯಿತು.

ನಗರದ ಡಾ.ಬಿ.ಆರ್.ಅಂಬೇಡ್ಕರ ವೃತ್ತದಲ್ಲಿ ಸಂತಕವಿ ಸರ್ವಜ್ಞ ಅವರ ಭಾವಚಿತ್ರದ ಮೆರವಣಿಗೆಗೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಚಾಲನೆ ನೀಡಿದರು. ಅಲ್ಲಿಂದ ಆರಂಭಗೊಡ ಮೆರವಣಿಗೆಯು ನಗರದ ಪ್ರಮುಖ ವೃತ್ತಗಳಲ್ಲಿ ಸಂಚರಿಸಿ ಜಿಲ್ಲಾ ರಂಗಮಂದಿರಕ್ಕೆ ಬಂದು ಸೇರಿತು.



ಡೊಳ್ಳಿನ ಕಲಾ ತಂಡಗಳ ಮೂಲಕ ಮೆರವಣಿಗೆಯು ಅದ್ಧೂರಿಯಾಗಿ ನಡೆಯಿತು. ಮೆರವಣಿಗೆಯಲ್ಲಿ ಮುಖಂಡರಾದ ಕೆ.ಶಾಂತಪ್ಪ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ತಹಸೀಲ್ದಾರ ಸುರೇಶ ವರ್ಮಾ ಸೇರಿದಂತೆ ಸಮಾಜದ ಪ್ರಮುಖರು ಇದ್ದರು.

ಬಳಿಕ ಜಿಲ್ಲಾ ರಂಗಮಂದಿರದಲ್ಲಿ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಯರಮರಸ್‌ನ ನಿವೃತ್ತ ಪ್ರಾಂಶುಪಾಲರಾದ ವೈ ಸುರೇಂದ್ರಬಾಬು ಕುಂಬಾರ ಅವರು ವಿಶೇಷ ಉಪನ್ಯಾಸ ನೀಡಿ, 16ನೇ ಶತಮಾನದ ಶ್ರೇಷ್ಠ ಕವಿಗಳಲ್ಲೊಬ್ಬರಾದ ಸರ್ವಜ್ಞ ಅವರು ತ್ರಿಪದಿ ರಚನೆಗಳ ಮೂಲಕ ಅರ್ಥಪೂರ್ಣ ವಚನಗಳನ್ನು ಜನತೆಗೆ ನೀಡಿದ್ದಾರೆ. ಹರಿತವಾದ ತ್ರಿಪದಿಯ ಸಾಲುಗಳ ಮೂಲಕ ಸಮಾಜದ ಅಂಕುಡೊಕುಗಳನ್ನು ತಿದ್ದುವ ಕೆಲಸ ಮಾಡಿದ್ದಾರೆ. ಸರ್ವಜ್ಞ ಅವರು ಕನ್ನಡ ನಾಡಿನ ಸಂಪತ್ತು ಎಂದು ತಿಳಿಸಿದರು.

ಮಹಾನಗರ ಪಾಲಿಕೆಯ ಸಮುದಾಯ ಸಂಘಟನಾಧಿಕಾರಿ ಕೃಷ್ಣ ಕಟ್ಟಿಮನಿ ಅವರು ಮಾತನಾಡಿ, ಸರ್ವಜ್ಞ ಅವರು ಕೇವಲ ಒಂದು ಜಾತಿಗೆ ಸೀಮಿತವಾಗಿಲ್ಲ. ಅವರು ಇಡೀ ಜಗತ್ತಿಗೆ ಉತ್ತಮ ಸಂದೇಶಗಳನ್ನು ನೀಡಿದ ಕವಿಯಾಗಿದ್ದಾರೆ. ಸಮ ಸಮಾಜ ನಿರ್ಮಾಣ ಕುರಿತು ಜನತೆಗೆ ತಮ್ಮ

3ನೇ ಪುಟಕ್ಕೆ



# ದಿನ್ನಿ, ಗಾರಲದಿನ್ನಿ ಗ್ರಾಮದಲ್ಲಿ ಗ್ರಾಮೀಣ ಶಾಸಕರ ಪ್ರವಾಸ

ರಾಯಚೂರು ಫೆ. 20

ಮಹರ್ಷಿ ವಾಲ್ಮೀಕಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಬಸನಗೌಡ ದದ್ದಲ್ ಅವರು ಫೆ.20ರಂದು ರಾಯಚೂರು ಗ್ರಾಮೀಣ ಕ್ಷೇತ್ರ ವ್ಯಾಪ್ತಿಯ ದಿನ್ನಿ ಹಾಗೂ ಗಾರಲದಿನ್ನಿ ಗ್ರಾಮಗಳಲ್ಲಿ ಪ್ರವಾಸ ಕೈಗೊಂಡರು.

ಇದೆ ವೇಳೆ ಶಾಸಕರು, ಶ್ರೀ ಈಶ್ವರ ದೇವಸ್ಥಾನದ ಗರುಡಸ್ತಂಭ ಸ್ಥಾಪನೆ ಮತ್ತು ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನ ಶಿಖರ ಉದ್ಘಾಟನೆ ಹಾಗೂ ಸುಕ್ಷೇತ್ರ ಶಿವಾನಂದಮಠ ಮೌನೇಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ನಡೆದ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಭಾಗಿಯಾದರು.

ಈ ಸಂದರ್ಭದಲ್ಲಿ ದಿನ್ನಿ ಹಾಗೂ ಗಾರಲದಿನ್ನಿ ಗ್ರಾಮಗಳ ಮುಖಂಡರು, ಗ್ರಾಮಸ್ಥರು ಮತ್ತು ಭಕ್ತಾದಿಗಳು ಉಪಸ್ಥಿತರಿದ್ದರು.

# ನ್ಯೂನ್ಯತೆಯುಳ್ಳ ಮಕ್ಕಳಿಗೆ ತಜ್ಞ ವೈದ್ಯರಿಂದ ತಪಾಸಣೆ ಶಿಬಿರ

ರಾಯಚೂರು ಫೆ.20-

ಆರ್‌ಬಿಎಸ್‌ಕೆ ವೈದ್ಯಕೀಯ ತಂಡವು ಕ್ಷೇತ್ರ ಮಟ್ಟದಲ್ಲಿ ಗುರುತಿಸಿದ ನ್ಯೂನ್ಯತೆಯುಳ್ಳ ಮಕ್ಕಳಿಗೆ ತಜ್ಞ ವೈದ್ಯರಿಂದ ಫೆ.20ರಂದು ತಪಾಸಣೆ ಶಿಬಿರ ನಡೆಯಿತು.

ರಾಯಚೂರು ನಗರದ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ನಡೆದ ಈ ಶಿಬಿರದಲ್ಲಿ ಹುಟ್ಟಿನಿಂದ 18 ವರ್ಷದೊಳಗಿನ ಜನ್ಮಜಾತ ಹೃದಯ ಖಾಯಿಲೆಯ 14 ಮಕ್ಕಳು, ಶೀಳು ತುಟಿ, ಶೀಳು ಅಂಗಳದ 3 ಮಕ್ಕಳಿಗೆ ತಪಾಸಣೆ ಮಾಡಲಾಯಿತು. ಮಕ್ಕಳ ತಜ್ಞರಾದ ಡಾ. ಇಮ್ಮಾನ್ ತಪಾಸಣೆ ನಡೆಸಿದರು.

ಜಿಲ್ಲೆಯಲ್ಲಿ ಪ್ರಸ್ತುತ 12 ಆರ್‌ಬಿಎಸ್‌ಕೆ ವೈದ್ಯಕೀಯ ತಂಡಗಳ ಕಾರ್ಯನಿರ್ವಹಿಸುತ್ತಿದ್ದು, ಪ್ರತಿ ತಂಡದಲ್ಲಿ ವೈದ್ಯರು, ಶುಶ್ರೂಷಕರು, ನೇತ್ರಾಧಿಕಾರಿಗಳು ಇದ್ದು, ಅಂಗನವಾಡಿ, ಶಾಲೆಗಳಲ್ಲಿ ತಪಾಸಣೆಕೈಗೊಂಡು ರಾಯಚೂರನ ತಾಯಿ ಮಕ್ಕಳ ಆಸ್ಪತ್ರೆಯಲ್ಲಿಮುಖ್ಯ ವೈದ್ಯಾಧಿಕಾರಿ ಡಾ.ಪ್ರಜ್ವಲ್ ಕುಮಾರ್ ನೇತೃತ್ವದಲ್ಲಿ ಪ್ರತಿ ಮಂಗಳವಾರ, ಶುಕ್ರವಾರ ಮಕ್ಕಳ ತಜ್ಞರಿಂದ ತಪಾಸಣೆ ಮಾಡಿಸಲಾಗುತ್ತದೆ. ಇದಕ್ಕೆ ನವೋದಯ ಹಾಗೂ ರಿವಮ್ಸ್ ಆಸ್ಪತ್ರೆಯ ತಜ್ಞರು ಕೈಜೋಡಿಸಿದ್ದಾರೆ.




ಜಿಲ್ಲಾ ಆರಂಭಿಕ ಮಧ್ಯಸ್ಥಿಕೆ ಕೇಂದ್ರ: ಮಕ್ಕಳ ಬೆಳವಣಿಗೆಗೆ ಕಾರಣವಾಗುವ ನಾಲ್ಕು ಕಾರಣಗಳನ್ನು ಗುರುತಿಸಿ ಮಕ್ಕಳ ತಜ್ಞರು, ಇಎನ್‌ಟಿ ತಜ್ಞರು, ಮಾನಸಿಕ ತಜ್ಞರು, ಪೀಜಿಯೋಥೆರಪಿಸ್ಟ್ ಅವರು ಅಗತ್ಯ ಚಿಕಿತ್ಸೆ , ಸಲಹೆಗಳನ್ನು ನೀಡುತ್ತಾರೆ. ಪ್ರಸ್ತುತ ಪ್ರತಿದಿನ 15-20 ಮಕ್ಕಳು ಕೇಂದ್ರದ ಸದುಪಯೋಗ ಪಡೆಯುತ್ತಿದ್ದಾರೆ.

ಖಾಸಗಿ ಆಸ್ಪತ್ರೆಗಳಲ್ಲಿ ಸಹ

3ನೇ ಪುಟಕ್ಕೆ

# ಮಹತ್ವದ ಜಲಧಾರೆ ಕಾಮಗಾರಿ ಕಾಲಮಿತಿಯೊಳಗೆ ಪೂರ್ಣವಾಗಲಿ: ಸಂಸದ ಜಿ.ಕುಮಾರ ನಾಯಕ

ರಾಯಚೂರು, ಫೆ.20 -

ರಾಯಚೂರು-ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದರಾದ ಜಿ ಕುಮಾರ ನಾಯಕ ಅವರು ಫೆ.20ರಂದು ರಾಯಚೂರು ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಪ್ರವಾಸ ಕೈಗೊಂಡು ಲಿಂಗಸುಗೂರ ತಾಲೂಕಿನ ಚಿತ್ತಾಪುರ ಗ್ರಾಮದಲ್ಲಿ ಕೇಂದ್ರ ಸರಕಾರದ ಮಹತ್ವ ಯೋಜನೆ ಜಲಧಾರೆ ಕಾಮಗಾರಿಯ ಪ್ರಗತಿ ಪರಿಶೀಲಿಸಿದರು.




ರಾಯಚೂರು ಜಿಲ್ಲೆಯ 860 ಗ್ರಾಮಗಳು ಹಾಗೂ 2000 ಲಕ್ಷಜನ ವಸತಿ ಪ್ರದೇಶಗಳು ಸೇರಿದಂತೆ ಮಾನ್ವಿ, ಮಸ್ಕಿ, ಕವಿತಾಳ, ತುರುವಿಹಾಳ, ಬಳಗಾನೂರ, ಸಿರವಾರ ಹಾಗೂ ಹಟ್ಟಿ ಪಟ್ಟಣಕ್ಕೆ ಡಿಬಿಓಟಿ ಆಧಾರದ ಮೇಲೆ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯನ್ನು ಜಲಜೀವನ್ ಮಿಷನ್ ಯೋಜನೆಯಡಿ ನಬಾರ್ಡ್ ಹಾಗೂ ಯುಡಿಡಿ ಅನುದಾನದ ಒಟ್ಟು 2200 ಕೋಟಿ ರೂ. ಮೊತ್ತದ ಕಾಮಗಾರಿಯನ್ನು ಬೇಗನೆ ಪೂರ್ಣಗೊಳಿಸಬೇಕು ಎಂದು ಇದೆ ವೇಳೆ ಸಂಸದರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಈ ಕಾಮಗಾರಿಯು 2024ರಲ್ಲಿಯೇ ಪೂರ್ಣವಾಗಬೇಕಿತ್ತು. ಆದರೆ, ಇದುವರೆಗೆ ಯಾಕೆ ಪೂರ್ಣಗೊಂಡಿಲ್ಲ ಎಂದು ಕೇಳಿದ ಸಂಸದರು, ಇದೆ ವೇಳೆ ಅಧಿಕಾರಿಗಳಿಗೆ ತರಾಟೆ ತೆಗೆದುಕೊಂಡರು.

ಈ ಯೋಜನೆಯು ಪೂರ್ಣವಾದಲ್ಲಿ ಪ್ರತಿ ದಿನ 1.60 ಕೋಟಿ ಲೀಟರ್ ನೀರನ್ನು ಸರಬರಾಜು ಮಾಡಲು ಸಾಧ್ಯವಾಗುತ್ತದೆ. ಈ ಯೋಜನೆ ಅನುಷ್ಠಾನಗೊಂಡಲ್ಲಿ ಜಿಲ್ಲೆಯ ಬಹುಭಾಗಗಳಿಗೆ ನೀರಿನ ಸಮಸ್ಯೆ ತಪ್ಪಲಿದೆ. ಇದನ್ನು ಅಧಿಕಾರಿ ಗಳು ಮತ್ತು ಗುತ್ತಿಗೆದಾರರು ಅರಿಯಬೇಕು. ಈ ಕಾಮಗಾರಿಯನ್ನು ಗುಣಮಟ್ಟದ ಜೊತೆಗೆ ಆದಷ್ಟು ಬೇಗನೆ ಪೂರ್ಣಗೊಳಿಸಬೇಕು ಎಂದು ಸಂಸದರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ವೇಳೆ ಜಲಧಾರೆ ಯೋಜನೆಯ ಯೋಜನಾ ವ್ಯವಸ್ಥಾಪಕರು ಹಾಗೂ ಗ್ರಾಮೀಣ ನೀರು ಸರಬರಾಜು ಇಲಾಖೆ ಅಧಿಕಾರಿಗಳು, ಸಾರ್ವಜನಿಕರು ಹಾಗೂ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

# ಕಡಲೇಕಾಳು ಖರೀದಿ ಪ್ರಕ್ರಿಯೆ ಆರಂಭ: ಬೆಂಬಲಬೆಲೆ ಯೋಜನೆಯ ಸದುಪಯೋಗಕ್ಕೆ ಮನವಿ

ರಾಯಚೂರು ಫೆ. 20-

2025-26ನೇ ಸಾಲಿನ ಹಿಂಗಾರು ಹಂಗಾಮಿನ ಬೆಂಬಲ ಬೆಲೆಯ ಎಫ್.ಎ.ಕ್ಯೂ ಉತ್ತಮ ಗುಣಮಟ್ಟದ ಕಡಲೇಕಾಳು ಖರೀದಿ ಪ್ರಕ್ರಿಯೆಯ ರೈತರ ನೋಂದಣಿಯನ್ನು ದಿನಾಂಕ 20.02.2026 ಶುಕ್ರವಾರದಿಂದ ಪ್ರಾರಂಭ ಮಾಡಲಾಗಿದ್ದು, ರೈತರು ಈ ಬೆಂಬಲ ಬೆಲೆ ಯೋಜನೆಯ ಪ್ರಯೋಜನೆ ಪಡೆದುಕೊಳ್ಳುವಂತೆ ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘದ ಅಧ್ಯಕ್ಷರಾದ ಪತಂಗೆ ಜಯವಂತರಾವ್ ಅವರು ರೈತರಲ್ಲಿ ಮನವಿ ಮಾಡಿದ್ದಾರೆ.

ಫ್ರೂಟ್ಸ್ ತಂತ್ರಾಶದಲ್ಲಿ ಕಡ್ಡಾಯವಾಗಿ ಬೆಳೆ ಸಮೀಕ್ಷೆ ನೋಂದಣಿಯಾದ ರೈತರಿಂದ ಎಕರೆಗೆ 4 ಕ್ವಿಂಟಲ್‌ನಂತೆ ಗರಿಷ್ಠ 40 ಕ್ವಿಂಟಲ್ ಒಬ್ಬ ರೈತರಿಂದ ಪ್ರತಿ ಕ್ವಿಂಟಲ್ ಕಡಲೇ ಕಾಳು ರೂ.5875 ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿಗೆ ಬರುವ ರೈತರು ಕಡ್ಡಾಯವಾಗಿ ಆಧಾರ ಕಾರ್ಡ್, ಪಹಣಿ, ಬ್ಯಾಂಕ್ ಪಾಸ್ ಪುಸ್ತಕ ನಕಲು ಪ್ರತಿ, ಒ.ಟಿ.ಪಿ ಗಾಗಿ ಮೊಬೈಲ್ ಮತ್ತು ರೈತರ ಬೆರಳಚ್ಚು ನೀಡುವುದು ಕಡ್ಡಾಯವಾಗಿರುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೆ ಜೆ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ



ಜಾಲಹಳ್ಳಿ,ಫೆ.20-

ಗ್ರಾಮದ ಜೆ ಜೆ ಪ್ರಾಥಮಿಕ ಹಾಗೂ ಪ್ರೌಢ ಶಾಲೆ ಆವರಣದಲ್ಲಿ ಶಾಲಾ ವಾರ್ಷಿಕೋತ್ಸ ವ ಹಾಗೂ ಬೀಳ್ಕೊಡುಗೆ ಸಮಾರಂಭ ಕಾರ್ಯಕ್ರಮ ಗುರುವಾರ ಸಂಜೆ ಜರುಗಿತು,

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಪಂ ಅಧ್ಯಕ್ಷೆ ವಿಜಯಲಕ್ಷ್ಮೀ ತೋಟದ್ ಅವರು ವಹಿಸಿದ್ದರು,

ಕಾರ್ಯಕ್ರಮದ ಮಹಾ ಸಾನಿಧ್ಯವನ್ನು ಪರಮಪೂಜ್ಯ ಶ್ರೀ ಷ. ಬ್ರ ವಿದ್ಯಾಮಾನ್ಯ ಶಿವಾಭಿನವ ಜಯಶಾಂತಲಿಂಗೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಬೃಹನ್ಮಠ ಜಾಲಹಳ್ಳಿ ಅವರು ವಹಿಸಿದ್ದರು,

ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮವನ್ನು ನೋಡಲು ಕಿಕ್ಕಿರಿದು ಜನ ಆಗಮಿಸಿತು,

ಇದೆ ಸಂದರ್ಭದಲ್ಲಿ ಸಿಆರ್ ಪಿ ಸೋಮಶೇಖರ್ ದೊರೆ, ವೀರಣ್ಣ ಪಾಣಿ ಸಾಹು ಉಪಾಧ್ಯಕ್ಷರು ಶ್ರೀ ಜೆ.ಜೆ. ಶಿಕ್ಷಣ ಸಂಸ್ಥೆ,ವೀರಣ್ಣ ಬಳಿ ಕಾರ್ಯದರ್ಶಿಗಳು ಜೆ.ಜೆ. ಶಿಕ್ಷಣ ಸಂಸ್ಥೆ ,ಭೀಮಣ್ಣ ನಾಡಗೌಡ ಚಿಂಚೋಡಿ ,ರಾಮನಗೌಡ ವಿ. ಮಾಲಿಪಾಟೀಲ,ಸಂಜೀವರೆಡ್ಡಿ ಬಿ. ಮಾಡಬಾಳ, ಭೀಮನಗೌಡ ಲಿಂಗದಹಳ್ಳಿ, ಗುರುಸ್ವಾಮಿ, ಶಿಕ್ಷಕರಾದ ಶಿವನಗೌಡ ಪಾಟೀಲ, ದಂಡನಗೌಡ ಪಾಟೀಲ್, ಮಾರುತಿ ರಾವ್ ಕುಲಕರ್ಣಿ, ಗುಡ್ಡಪ್ಪ, ವಿಜಯಲಕ್ಷ್ಮಿ, ನಿಂಗಯ್ಯ ಹೊಸೂರು, ಮುತ್ತಿನ, ಮತ್ತು ಗ್ರಾಮಸ್ಥರು ಯುವಕರು, ವಿವಿಧ ಸಂಘ ಸಂಸ್ಥೆಗಳ ಮುಖಂಡರು ಭಾಗವಹಿಸಿದ್ದರು,

# ಎಮ್ ಇಂಗ್ಲಿಷ್ ಮಾಧ್ಯಮ ಪೂರ್ವ ಪ್ರಾಥಮಿಕ ಶಾಲೆಯಲ್ಲಿ 3 ನೇ ವರ್ಷದ ವಾರ್ಷಿಕೋತ್ಸವ




ಕವಿತಾಳ,ಫೆ.20-

ಖಾಸಗಿ ಶಾಲೆ ಸಂಸ್ಥೆಗಳು ನಡೆಸುವುದು ಹಳೆಯ ಲಾರಿ ನಡಿಸಿದಂತೆ ಆರ್ಥಿಕವಾಗಿ ಧನ ಇರುವಂತಹ ವ್ಯಕ್ತಿಗಳು ಶಾಲೆ ಕಟ್ಟುವುದಕ್ಕೆ ಮುಂದೆ ಬರುತ್ತಿಲ್ಲ ಎಂದು ರಾಯಚೂರು ಖಾಸಗಿ ಶಾಲೆಯ ಮುಖ್ಯಸ್ಥ ರವಿಕುಮಾರ್ ಹೇಳಿದರು ಇಲ್ಲಿನ ಎಮ್ ಇಂಗ್ಲಿಷ್ ಮಾಧ್ಯಮ ಪೂರ್ವ ಪ್ರಾಥಮಿಕ ಶಾಲೆಯಲ್ಲಿ 3 ನೇ ವರ್ಷದ ವಾರ್ಷಿಕೋತ್ಸವದ ಕಾರ್ಯಕ್ರಮ ಉದ್ಘಾಟನೆ ಮಾಡಿ ಅವರು ಮಾತನಾಡಿರು. ಈ ತಾಂತ್ರಿಕ ಯುಗದಲ್ಲಿ ಮಕ್ಕಳಲ್ಲಿ ಶಿಕ್ಷಣದ ಜೊತೆಗೆ ಸಂಸ್ಕಾರ ಕಲಿಸುವುದು ಅತಿ ಮುಖ್ಯ. ಒಂದು ಶಾಲೆ ಕಟ್ಟುವುದರಿಂದ 10 ಮಂದಿರಗಳಿಗೆ ಸಮ. ಪ್ರತಿಯೊಬ್ಬರು ಮನೆಯ ಮುಂದೆ ಗಿಡಗಳನ್ನು ನೆಟ್ಟು ಮಿತವಾಗಿ ನೀರನ್ನು ಬಳಸಬೇಕು ಎಂದರು.

ಬಲವಂತರಾಯ ಗೌಡ ವಟಗಲ ಮಾತನಾಡಿ ಪಾಲಕರು ಶಿಕ್ಷಕರು ಸಂಸ್ಥಾಪಕರು ಕೈಜೋಡಿಸಿದಾಗ

3ನೇ ಪುಟಕ್ಕೆ

### ಬಳ್ಳಾರಿ: ದ್ವಿತೀಯ ಪಿಯುಸಿ-15,652 ವಿದ್ಯಾರ್ಥಿಗಳು, ಎಸ್‌ಎಸ್‌ಎಲ್‌ಸಿ-23,271 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಣಿ

# ವಿದ್ಯಾರ್ಥಿಗಳಿಗೆ ಜಿಲ್ಲಾಡಳಿತದಿಂದ ಸ್ನೇಹಮಯಿ ವಾತಾವರಣ: ಡಿಸಿ ನಾಗೇಂದ್ರ ಪ್ರಸಾದ್.ಕೆ




ಬಳ್ಳಾರಿ,ಫೆ.20-

ಜಿಲ್ಲೆಯಲ್ಲಿ ಈ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಗೆ 15,652 ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ 23,271 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ವಿದ್ಯಾರ್ಥಿಗಳಿಗೆ ಪರೀಕ್ಷಾ ಹಿತದೃಷ್ಟಿಯಿಂದ ಜಿಲ್ಲಾಡಳಿತ ವತಿಯಿಂದ ಸ್ನೇಹಮಯಿ ವಾತಾವರಣ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಗುರುವಾರ ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ದ್ವಿತೀಯ ಪಿಯುಸಿ ಮತ್ತು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಕುರಿತಂತೆ ಪರೀಕ್ಷೆಗಳ ವೇಳಾಪಟ್ಟಿ, ವಿದ್ಯಾರ್ಥಿಗಳ ಸಂಖ್ಯೆ, ಭದ್ರತಾ ವ್ಯವಸ್ಥೆಗಳು, ಉಚಿತ ಸಾರಿಗೆ ಹಾಗೂ ಪ್ರಶ್ನೆಪತ್ರಿಕೆ ಸೋರಿಕೆ ವಿರುದ್ಧ ಕಠಿಣ ಕ್ರಮಗಳ ಕುರಿತು ಮಾಹಿತಿ ನೀಡಲು ಏರ್ಪಡಿಸಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ದ್ವಿತೀಯ ಪಿಯುಸಿ:

ದ್ವಿತೀಯ ಪಿಯುಸಿ ಪರೀಕ್ಷೆ-1 ಇದೇ ಫೆಬ್ರವರಿ 28ರಿಂದ ಮಾರ್ಚ್ 17ರವರೆಗೆ ನಡೆಯಲಿದೆ. ಜಿಲ್ಲೆಯಲ್ಲಿ ಒಟ್ಟು 15,652 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದು, ಇವರಲ್ಲಿ 13,286 ಹೊಸ ಅಭ್ಯರ್ಥಿಗಳು(ಹುಡುಗ-5,580 ಮತ್ತು ಹುಡುಗಿಯರು-7,706), 1,899 ಮರು ಪರೀಕ್ಷಾರ್ಥಿಗಳು, 467 ಖಾಸಗಿ ಅಭ್ಯರ್ಥಿಗಳು ಒಳಗೊಂಡಿದ್ದಾರೆ. ಬಳ್ಳಾರಿ ನಗರ-12, ಸಿರುಗುಪ್ಪ-03, ಸಂಡೂರು-02, ಕಂಪ್ಲಿ-02 ಮತ್ತು ಕುರುಗೋಡು-01 ಸೇರಿದಂತೆ ಒಟ್ಟು 20 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿವೆ ಎಂದು ಹೇಳಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆ:

ಅದೇರೀತಿಯಾಗಿ ಎಸ್.ಎಸ್.ಎಲ್.ಸಿ ಪರೀಕ್ಷೆ-1 ಮಾರ್ಚ್ 18ರಿಂದ ಏಪ್ರಿಲ್ 2ರವರೆಗೆ ನಡೆಯಲಿವೆ. ಜಿಲ್ಲೆಯಲ್ಲಿ ಒಟ್ಟು 326 ಹತ್ತನೆಯ ಶಾಲೆಗಳಿಂದ ಒಟ್ಟು 23,271 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದು, ಇವರಲ್ಲಿ 19,722 ಹೊಸ ಅಭ್ಯರ್ಥಿಗಳು, 2,009 ಮರು ಪರೀಕ್ಷಾರ್ಥಿಗಳು, 1,328 ಖಾಸಗಿ ಅಭ್ಯರ್ಥಿಗಳು, 212 ಖಾಸಗಿ ಮರು ಪರೀಕ್ಷಾರ್ಥಿಗಳು ಒಳಗೊಂಡಿದ್ದಾರೆ. ಒಟ್ಟು ಜಿಲ್ಲೆಯ 65 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಜರುಗಲಿವೆ ಎಂದು ತಿಳಿಸಿದರು.

ವಿದ್ಯಾರ್ಥಿಗಳಿಗೆ ಸ್ನೇಹಮಯಿ ವಾತಾವರಣ:

ಪ್ರತಿ ಪರೀಕ್ಷಾ ಕೇಂದ್ರಕ್ಕೆ ಒಬ್ಬ ಅಧಿಕಾರಿಯನ್ನು ವೀಕ್ಷಕರನ್ನಾಗಿ ನೇಮಕ ಮಾಡಲಾಗಿದೆ. ವಿದ್ಯಾರ್ಥಿಗಳಿಗೆ ಪರೀಕ್ಷಾ ಹಿತದೃಷ್ಟಿಯಿಂದ ಜಿಲ್ಲಾಡಳಿತ ವತಿಯಿಂದ ಸ್ನೇಹಮಯಿ ವಾತಾವರಣ ಕಲ್ಪಿಸಲಾಗಿದೆ. ಪರೀಕ್ಷೆಗೆ ಹಾಜರಾಗುವ ಎಲ್ಲಾ ವಿದ್ಯಾರ್ಥಿಗಳಿಗೆ ಪರೀಕ್ಷಾ ಪ್ರವೇಶ ಪತ್ರವನ್ನು ತೋರಿಸಿ, ಕೆಕೆಆರ್‌ಟಿಸಿ ಮತ್ತು ನಗರ ಸಾರಿಗೆ ಬಸ್‌ಗಳಲ್ಲಿ ಪರೀಕ್ಷಾ ಕೇಂದ್ರಕ್ಕೆ ತೆರಳಲು ಮತ್ತು ಹಿಂತಿರುಗಲು ಉಚಿತ ಪ್ರಯಾಣಕ್ಕೆ ಅವಕಾಶ ಕಲ್ಪಿಸಲಾಗಿದೆ ಎಂದರು.

ವಿದ್ಯಾರ್ಥಿಗಳಿಗೆ ಉಚಿತ ಸಾರಿಗೆ:

ಪರೀಕ್ಷಾ ಅವಧಿಯಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಕೇಂದ್ರಗಳಿಗೆ ಸುಲಭವಾಗಿ ಹೋಗಲು ಕೆಕೆಆರ್‌ಟಿಸಿ ಬಸ್ಸುಗಳಲ್ಲಿ ಉಚಿತ ಪ್ರಯಾಣ ಸೌಲಭ್ಯ ಒದಗಿಸಲಾಗಿದೆ. ವಿದ್ಯಾರ್ಥಿಗಳು ಪ್ರವೇಶ ಪತ್ರ ತೋರಿಸಿ ಪ್ರಯಾಣಿಸಬಹುದಾಗಿದೆ. ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸೂಕ್ತ ಗಾಳಿ, ಬೆಳಕು, ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ ಸಮರ್ಪಕವಾಗಿರುವಂತೆ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರಿಗೆ ಸೂಚಿಸಲಾಗಿದೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್ ಅವರು ಮಾತನಾಡಿ, ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲಾಗುತ್ತದೆ. ಈ ವ್ಯಾಪ್ತಿಯಲ್ಲಿರುವ ಜೆರಾಕ್ಸ್ ಅಂಗಡಿಗಳು, ಸೈಬರ್ ಸೆಂಟರ್‌ಗಳನ್ನು ಮುಚ್ಚಲು ಜಿಲ್ಲಾಧಿಕಾರಿಯವರ ಆದೇಶದ ಮೂಲಕ ಆದೇಶಿಸಲಾಗುತ್ತದೆ ಎಂದು ಹೇಳಿದರು.

ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ತಪ್ಪು ಮಾಹಿತಿಯನ್ನು ತಡೆಯಲು ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ನಿಗಾವಹಿಸಿದೆ. ಸಾಮಾಜಿಕ ಜಾಲತಾಣಗಳಲ್ಲಿ ಪ್ರಶ್ನೆಪತ್ರಿಕೆ ಸೋರಿಕೆಯ ಸುಳ್ಳು ಪ್ರಚಾರ ಮಾಡುವ ಖಾತೆಗಳನ್ನು ಗುರುತಿಸಿ ತಡೆದು ಕಾನೂನು ಕ್ರಮ ಕೈಗೊಳ್ಳಲಾಗುವುದು. ಪರೀಕ್ಷೆಗಳು ಸುರಕ್ಷಿತವಾಗಿ ನಡೆಯಲು ಎಲ್ಲರ ಸಹಕಾರ ಅಗತ್ಯವಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಪರೀಕ್ಷಾ ಕೇಂದ್ರಗಳಲ್ಲಿ ವೆಬ್ ಕಾಸ್ಟಿಂಗ್ ಮೂಲಕ ಕಣ್ಗಾವಲು ಇಡಲಾಗುತ್ತದೆ. ಪರೀಕ್ಷಾ ಕೇಂದ್ರಗಳ ಒಳಗಡೆ, ಹೊರಗಡೆ ಮತ್ತು ಪ್ರಾಚಾರ್ಯರ ಕೊಠಡಿಗಳಲ್ಲಿಯೂ ಸಹ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗುತ್ತದೆ ಎಂದರು.

ಈ ವೇಳೆ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಇದ್ದರು.



## ಮಹಿಳೆಯರು ಆರ್ಥಿಕವಾಗಿ ಸದೃಡರಾದಾಗ ಮಾತ್ರ ಪರಿವರ್ತನೆ ಸಾಧ್ಯ : ಶಾಸಕ ತುನ್ನೂರ

ಯಾದಗಿರಿ, ಫೆ.20-

ಪ್ರಸಕ್ತ ದಿನಗಳಲ್ಲಿ ಗ್ರಾಮೀಣ ಭಾಗದಲ್ಲಿರುವ ಮಹಿಳೆಯರಲ್ಲಿ ಕೂಡ ಹಲವಾರು ಪ್ರತಿಭೆಗಳಿರುತ್ತವೆ, ಅವರು ಮಹಿಳಾ ಸಂಘಗಳನ್ನು ಕಟ್ಟಿಕೊಂಡು ಸ್ವಾವಲಂಬನೆ ಬದುಕು ಸಾಗಿಸಲು ಶ್ರಮಿಸುತ್ತಿದ್ದಾರೆ, ಅವರು ಆರ್ಥಿಕವಾಗಿ ಸದೃಡರಾದಾಗ ಮಾತ್ರ ಪರಿವರ್ತನೆ ಸಾಧ್ಯ ಎಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ ಹೇಳಿದರು,

ಬುಧವಾರ ನಗರದ ತಮ್ಮ ಜನಸಂಪರ್ಕ ಕಛೇರಿಯಲ್ಲಿ ಕೃಷಿ ಇಲಾಖೆ ಮತ್ತು ಜಲಾಯನ ಅಭಿವೃದ್ಧಿ ಇಲಾಖೆ ಯಾದಗಿರಿ ವಿಶ್ವ ಬ್ಯಾಂಕ್ ನೆರವಿನ ರಿವಾರ್ಡ್ ಯೋಜನೆಯಡಿಯಲ್ಲಿ ಮಂಜೂರಾದ ಯಾದಗಿರಿ ಮತಕ್ಷೇತ್ರದ 55 ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ತಲಾ 50 ಸಾವಿರ ರೂ. ಸುತ್ತು ನಿಧಿ ಪ್ರಮಾಣ ಪತ್ರಗಳನ್ನು ಮಹಿಳೆಯರಿಗೆ ವಿತರಿಸಿ ಮಾತನಾಡಿದರು.

ರಾಜ್ಯದಲ್ಲಿ ಅಧಿಕಾರದಲ್ಲಿರುವ ನಮ್ಮ ಕಾಂಗ್ರೆಸ್ ಸರ್ಕಾರ ಈಗಾಗಲೇ ಎಲ್ಲಾ ವರ್ಗದ ಕುಟುಂಬಗಳ ಓರ್ವ ಮಹಿಳೆಗೆ ಗೃಹಲಕ್ಷ್ಮಿ??ೀ ಯೋಜನೆ ಮೂಲಕ ತಿಂಗಳಿಗೆ ತಲಾ 2 ಸಾವಿರ ಕೌಟುಂಬಿಕ ನಿರ್ವಹಣೆಗಾಗಿ ನೀಡುತ್ತಿದೆ, ಜೊತೆಗೆ ಹಲವಾರು ಯೋಜನೆಗಳ ಮೂಲಕ ಅವರು ಸಮಾಜದ ಮುಖ್ಯ ವಾಹಿನಿಗೆ ಬರಲು ಪ್ರೋತ್ಸಾಹ ಧನವನ್ನು ಕೂಡ ಮಹಿಳಾ ಸಂಘಗಳಿಗೆ ನೀಡುವ ಮೂಲಕ ಅವರಿಗೆ ಅನೇಕ ಚಟುವಟಿಕೆಗಳನ್ನು ಕೈಗೊಳ್ಳಲು ಆರ್ಥಿಕ ಬೆಂಬಲ ನೀಡುತ್ತಿದೆ ಎಂದು ತಿಳಿಸಿದರು. ಎಲ್ಲಾ ಮಹಿಳೆಯರು ದಯವಿಟ್ಟು ತಮ್ಮ ಮಕ್ಕಳಿಗೆ ತಪ್ಪದೇ ಶಿಕ್ಷಣ ಒದಗಿಸಿ, ಹೆಣ್ಣು ಮಕ್ಕಳಿಗೆ ವಿಶೇಷವಾಗಿ ಗಮನ ಹರಿಸಬೇಕು, ಅವರು ವಯಸ್ಕರಾಗುವ ಮುನ್ನ ಯಾವುದೇ ಕಾರಣಕ್ಕೂ ಬಾಲ್ಯ ವಿವಾಹ ಮಾಡಬೇಡಿ ಎಂದು ಸಲಹೆ ನೀಡಿದರು. ಕೃಷಿ ಇಲಾಖೆ ಉಪ ನಿರ್ದೇಶಕ ಹಂಪಣ್ಣ ಮಾತನಾಡಿ, ಸರ್ಕಾರದ ಯೋಜನೆಗಳನ್ನು ರೈತರಿಗೆ ಹಾಗೂ ಮಹಿಳೆಯರಿಗೆ ಪ್ರಾಮಾಣಿಕವಾಗಿ ತಲುಪಿಸಲಾಗುತ್ತಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ತಾಲ್ಲೂಕಾ ಸಹಾಯಕ ಕೃಷಿ ನಿರ್ದೇಶಕ ಸುರೇಶ, ಕೃಷಿ ಅಧಿಕಾರಿಗಳಾದ ಯಾಮರಡ್ಡಿ, ನರೇಶ, ಅಯ್ಯಣ್ಣ ಸೇರಿದಂತೆ ಮಹಿಳಾ ಸ್ವ-ಸಹಾಯ ಸಂಘಗಳ ಮಹಿಳೆಯರು ಉಪಸ್ಥಿತರಿದ್ದರು,



## ವಿದ್ಯಾರ್ಥಿಗಳು ಕಲಿಕಾ ಸಾಮಗ್ರಿಗಳ ಸದುಪಯೋಗ ಪಡೆದುಕೊಳ್ಳಿ. ಶಾಂತಿ ಭಾರತಿ

ಯಾದಗಿರಿ, ಫೆ.20-

ವಿದ್ಯಾರ್ಥಿಗಳು ನಿತ್ಯ ಶಾಲೆಗೆ ಬಂದು, ಆಟ ಪಾಠದ ಜೊತೆಗೆ ಕಲಿಕಾ ಸಾಮಗ್ರಿಗಳನ್ನು ಸದುಪ ಯೋಗ ಪಡೆದು ಕೊಳ್ಳಬೇಕು ಎಂದು ಯಾದಗಿರಿ ಎಸ್ ಬಿ ಐ ಬ್ಯಾಂಕ್ ನ ಮುಖ್ಯ ವ್ಯವಸ್ಥಾಪಕಿ ಶಾಂತ ಭಾರತಿ ಜಿ. ಹೇಳಿದರು.

ಗುರುವಾರ ನಗರದ ಸ್ಟೇಷನ್ ಏರಿಯಾ ಹಾಗೂ ಶಿವ ನಗರದಲ್ಲಿನ ಎರಡು ಅಂಗನವಾಡಿ ಶಾಲೆಗಳ ಸುಂದರಿಕರಣ, ಮೂಲಭೂತ ಸೌಕರ್ಯ ಸೇರಿದಂತೆ ಕಲಿಕಾ ಸಾಮಗ್ರಿ ಗಳನ್ನು ವಿತರಿಸಿ ಮಾತ ನಾಡಿ, ಎಸ್ ಬಿ ಐ ಬ್ಯಾಂಕ್, ಹಾಗೂ ಸುರಭಿ, ಫೌಂಡೇಶನ್ ಟ್ರಸ್ಟ್ ವತಿಯಿಂದ ನಗರದಲ್ಲಿನ ಎರಡು ಅಂಗನವಾಡಿ ಶಾಲೆ ದುರಸ್ಥಿ ಹಾಗೂ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸುತ್ತಿದ್ದು, ವಿದ್ಯಾರ್ಥಿಗಳು ಇವುಗಳ ಸದುಪಯೋಗ ಪಡೆಯಬೇಕು ಎಂದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕ್ಷಕಿ ದೀಪಿಕಾ ಬಿ. ವಿ. ಮಾತನಾಡಿ , ಎಸ್ ಬಿ ಐ ಬ್ಯಾಂಕ್ ಹಾಗೂ ಸುರಭಿ ಫೌಂಡೇಶನ್ ಟ್ರಸ್ಟ್ ವತಿಯಿಂದ ನಗದರದಲ್ಲಿನ ಎರಡು ಅಂಗನವಾಡಿ ಶಾಲೆಗಳ ಸುಣ್ಣ, ಬಣ್ಣ,ಗಳಿಂದ ಸುಂದರಿಕರಿಸುವ ಹಾಗೂ ಕಲಿಕಾ ಸಾಮಗ್ರಿಗಳನ್ನು ಉಚಿತವಾಗಿ ನೀಡುವ ಕಾರ್ಯ ಮಾದರಿ ಕಾರ್ಯವಾಗಿದೆ ಎಂದರು.

ಕೊಲ್ಲೂರು ಮಲ್ಲಪ್ಪ ಪದವಿ ಕಾಲೇಜು ಪ್ರಾಂಶುಪಾಲ ಕಿರಣಕುಮಾರ್ ಎಚ್.ಕೆ ಮಾತನಾಡಿ, ಎಸ್ ಬಿ ಐ ಬ್ಯಾಂಕ್ ಹಾಗೂ ಸುರಭಿ ಫೌಂಡೇಶನ್ ಟ್ರಸ್ಟ್ ಸಹಯೋಗದಲ್ಲಿನ ಕಾರ್ಯ ಮಹತ್ತರವಾಗಿದ್ದು, ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಶಾಲೆಗಳ ನೆರವಿಗೆ ಮುಂದಾಗಲಿ ಎಂದರು.

ಈ ಸಂಧರ್ಭದಲ್ಲಿ ನಗರಸಭೆ ಸದಸ್ಯೆ ಚಂದ್ರಕಲಾ ಮಡ್ಡಿ, ಬ್ಯಾಂಕ್ ನ ಸಹಾಯಕ ವ್ಯವಸ್ಥಾಪಕ ಅಮರೇಶ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಹಾಯಕ ಅಧಿಕ್ಷಕ ನರೇಂದ್ರ ರೆಡ್ಡಿ, ಮೇಲ್ವಿಚಾರಕಿ ಸೈದಾ ರೂಖಿಯಾ ಖಾತೂನ್, ಸುರಭಿ ಫೌಂಡೇಶನ್ ಟ್ರಸ್ಟ್ ನ ಕ್ಷೇತ್ರ ಸಂಯೋಜಕರಾದ ರಾಜು, ರವಿ, ಕಾಂಗ್ರೆಸ್ ಮುಖಂಡ ಪ್ರವೀಣ್ ಕುಮಾರ್, ಅಂಗನವಾಡಿ ಕಾರ್ಯಕರ್ತೆರಾದ ರೇಣುಕಾ, ಚಂದ್ರಕಲಾ, ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

### ರಾಷ್ಟ್ರೀಯ ಸೇವಾ ಯೋಜನೆಯ ವಿದ್ಯಾರ್ಥಿಗಳಿಗೆ ಒಂದು ದಿನದ ತರಬೇತಿ ಕಾರ್ಯಾಗಾರ

# ಯುವ ಪೀಳಿಗೆ ತಂಬಾಕು ಸೇವನೆಯಿಂದ ದೂರವಿರಿ - ಡಾ. ಟಿ.ಲಿಂಗರಾಜು



ಕೊಪ್ಪಳ ಫೆ.20-

ಇಂದಿನ ಯುವ ಪೀಳಿಗೆ ತಂಬಾಕು ಸೇವನೆಯಿಂದ ದೂರವಿದ್ದು, ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಟಿ.ಲಿಂಗರಾಜು ಹೇಳಿದರು.

ಅವರು ಬುಧವಾರ ಕೊಪ್ಪಳ ನಗರದಲ್ಲಿನ ಹಳೇ ಜಿಲ್ಲಾಸ್ಪತ್ರೆಯ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿ ತಂಬಾಕು ಸೇವನೆಯಿಂದ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳು ಮತ್ತು ಕೋಟ್ಪಾ-2003 ಕಾಯ್ದೆ ಅನುಷ್ಠಾನ ಕುರಿತು ''ರಾಷ್ಟ್ರೀಯ ಸೇವಾ ಯೋಜನೆಯ ವಿದ್ಯಾರ್ಥಿಗಳಿಗೆ'' ಹಮ್ಮಿಕೊಂಡಿದ್ದ ಒಂದು ದಿನ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ತಂಬಾಕು ಸೇವನೆಯಿಂದ ಆರೋಗ್ಯದ ಮೇಲೆ ಹಲವಾರು ದುಷ್ಪರಿಣಾಮಗಳು ಉಂಟಾಗುತ್ತವೆ. ಸಿಗರೇಟ್, ಬೀಡಿ, ಸಿಗಾರ್, ಹುಕ್ಕಾ ತಂಬಾಕು ವಿಧಗಳಾಗಿವೆ. ತಂಬಾಕು ಸೇವನೆಯಿಂದ ಕ್ಯಾನ್ಸರ್, ಹೃದಯ ಸಂಬಂಧಿ ಕಾಯಿಲೆ, ಶ್ವಾಸಕೋಶದ ಕಾಯಿಲೆ, ಲಕ್ವಾ ಇತರೆ ಕಾಯಿಲೆಗಳು ಸಂಭವಿಸುತ್ತವೆ. ಪ್ರತಿ ಸಿಗರೇಟ್,ಬೀಡಿ ಸೇವನೆಯಿಂದ 7 ನಿಮಿಷ ಆಯಸ್ಸು ಕಡಿಮೆ ಮಾಡುತ್ತದೆ ಎಂದು ವಿಶ್ವ ಆರೋಗ್ಯ ಸಂಸ್ಥೆ ತಿಳಿಸುತ್ತದೆ. ತಂಬಾಕಿನಲ್ಲಿ ನಿಕೋಟಿನ್ ಎಂಬ ವಿಷಕಾರಕ ಪದಾರ್ಥ ಇದ್ದು, ಇದರಲ್ಲಿ 3000 ದಿಂದ 7000 ಅಪಾಯಕಾರಿ ರಾಸಾಯನಿಕ ವಿಷಾನಿಲಗಳು ಇರುತ್ತವೆ. ಮಹಿಳೆಯರಲ್ಲೂ ತಂಬಾಕು ಸೇವನೆಯಿಂದ ಗರ್ಭಪಾತ, ಗರ್ಭಕಂಠದ ಕ್ಯಾನ್ಸರ್, ಕಡಿಮೆ ತೂಕವಿರುವ ಮಗುವಿನ ಜನನ ಹಾಗೂ ಶಿಶುಮರಣ ಸಂಭವಿಸುವ ಸಾಧ್ಯತೆ ಇರುತ್ತದೆ. ಪ್ರತಿ ವರ್ಷ ವಿಶ್ವದಾದ್ಯಂತ 60 ಲಕ್ಷಕ್ಕಿಂತ ಹೆಚ್ಚು ಜನರು ತಂಬಾಕು ಸೇವನೆಯಿಂದ ಉಂಟಾಗುವ ಕಾಯಿಲೆಗಳಿಂದ ಸಾವನ್ನಪ್ಪುತ್ತಿದ್ದಾರೆ. ಇದನ್ನು ಅರಿತುಕೊಂಡ ಸಾರ್ವಜನಿಕರು, ವಿಶೇಷವಾಗಿ ಯುವ ಜನರು ತಂಬಾಕು ಸೇವನೆಯಿಂದ ದೂರವಿರಬೇಕು ಎಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಅನುಷ್ಠಾನಾಧಿಕಾರಿ ಡಾ. ರವೀಂದ್ರನಾಥ್ ಎಂ.ಹೆಚ್. ಅವರು ಮಾತನಾಡಿ, ತಂಬಾಕು ತ್ಯಜಿಸುವುದರಿಂದ ಮತ್ತು ವ್ಯಸನಿಗಳು ನಿಲ್ಲಿಸಿದ ಕ್ಷಣದಿಂದ ಶ್ವಾಸಕೋಶ ಮತ್ತು ಹೃದಯ ಉತ್ತಮವಾಗಿ ಕಾರ್ಯನಿರ್ವಹಿಸಲು ಸಹಾಯ ಮಾಡುತ್ತದೆ. ಹಾಗಾಗಿ ಪೌಷ್ಠಿಕ ಆಹಾರ ಸೇವನೆಯನ್ನು ನಮ್ಮ ಜೀವನ ಶೈಲಿಯಲ್ಲಿ ಅಳವಡಿಸಿಕೊಳ್ಳಬೇಕು. ವಿದ್ಯಾರ್ಥಿಗಳು ತಂಬಾಕು ಸೇವನೆಯಂತಹ ದುಶ್ಚಟದಿಂದ ದೂರವಿರಬೇಕು ಮತ್ತು ವಿದ್ಯಾಭ್ಯಾಸದಲ್ಲಿ ಹೆಚ್ಚಿನ ಗಮನ ಹರಿಸಿ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ರಾಜ್ಯ ತಂಬಾಕು ನಿಯಂತ್ರಣ ಕೋಶದ ವಿಭಾಗೀಯ ಸಂಯೋಜಕ ಮಹಾಂತೇಶ್ ಬಿ. ಉಳ್ಳಾಗಡ್ಡಿ ಅವರು ಮಾತನಾಡಿ, ಭಾರತ ಸರ್ಕಾರವು ರಾಷ್ಟ್ರೀಯ ತಂಬಾಕು ನಿಯಂತ್ರಣ ಬಗ್ಗೆ 2003ರಲ್ಲಿ ಕೋಟ್ಪಾ ಕಾಯ್ದೆಯನ್ನು ಜಾರಿಗೊಳಿಸಿದೆ. ಸೆಕ್ಷನ್-4 ಪ್ರಕಾರ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವುದು ನಿಷೇಧ, ಸೆಕ್ಷನ್-5ರ ಪ್ರಕಾರ ತಂಬಾಕು ಉತ್ಪನ್ನಗಳ ನೇರ ಹಾಗೂ ಪರೋಕ್ಷ ಜಾಹೀರಾತು, ಉತ್ತೇಜನ ಪ್ರಯೋಜಕತೆ ನಿಷೇಧ, ಸೆಕ್ಷನ್-6(ಎ) ತಂಬಾಕು ಉತ್ಪನ್ನಗಳು ಅಪ್ರಾಪ್ತ ವಯಸ್ಕರಿಗೆ (21 ವರ್ಷದೊಳಗಿನ ಮಕ್ಕಳು) ಸಿಗದಂತೆ ನಿಯಂತ್ರಣ ಮಾಡುವುದು, ಸೆಕ್ಷನ್-6ಬಿ ಪ್ರಕಾರ ಶಿಕ್ಷಣ ಸಂಸ್ಥೆಗಳ 100 ಅಂತರ ಗಜಗಳ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವುದು ಶಿಕ್ಷಾರ್ಹ ಅಪರಾಧ, ಸೆಕ್ಷನ್-7 ಪ್ರಕಾರ ಸಿಗರೇಟ್ ಮತ್ತು ಇತರೆ ತಂಬಾಕು ಉತ್ಪನ್ನಗಳ ಮೇಲೆ ನಿರ್ಧಿಷ್ಟ ಆರೋಗ್ಯ ಎಚ್ಚರಿಕೆಗಳ ಸಂದೇಶಗಳಿಲ್ಲದೆ ಮಾರುವುದನ್ನು ನಿಷೇಧಿಸಲಾಗಿದೆ. ಈ ನಿಯಮಗಳನ್ನು ಉಲ್ಲಂಘಿಸಿದಲ್ಲಿ ಕೋಟ್ಪಾ ಕಾಯ್ದೆ-2003 ಕಲಂ 20ರ ಅಡಿಯಲ್ಲಿ ದಂಡ ಮತ್ತು ಜೈಲು ಶಿಕ್ಷೆಗೆ ಒಳಪಡಿಸಲಾಗುವುದು. ಯುವಜನತೆ ತಂಬಾಕು ಸೇವನೆಯಿಂದ ದೂರವಿರಬೇಕು ಎಂದು ಹೇಳುತ್ತಾ, ತಂಬಾಕು ವ್ಯಸನ ಮುಕ್ತ ಕೇಂದ್ರದಲ್ಲಿ ಸಿಗುವ ಸೌಲಭ್ಯಗಳ ಬಗ್ಗೆ ತಿಳಿಸಿದರು. ಕಾರ್ಯಾಗಾರದಲ್ಲಿ ಜಿಲ್ಲಾ ಸರ್ವೇಕ್ಷಣಾ ಮತ್ತು ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ನಂದಕುಮಾರ ಹೆಜ್., ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವಿ.ಪಿ., ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಸಂಗಪ್ಪ ಮುಮಟಗೇರಿ, ಸೈಕಾಲಾಜಿಸ್ಟ್ ಶಾಂತಮ್ಮ ಕಟ್ಟಿಮನಿ, ಸಮಾಜ ಕಾರ್ಯಕರ್ತೆ ಸರಸ್ವತಿ ಹಾಗೂ ಎನ್.ಎಸ್.ಎಸ್ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಜೀತ, ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕೈಜೋಡಿಸಿ: ನ್ಯಾ.ರಾಜೇಶ್ ಎನ್.ಹೊಸಮನೆ



ಬಳ್ಳಾರಿ,ಫೆ.20-

ಜೀತ ಕಾರ್ಮಿಕ ಪದ್ಧತಿ, ಬಾಲಕಾರ್ಮಿಕ ಪದ್ಧತಿ ನಿಷೇಧ ಕಾಯ್ದೆ ಜಾರಿಯಲ್ಲಿದೆ. ಈ ಕಾಯ್ದೆ ಉಲ್ಲಂಘಿಸುವವರು ಶಿಕ್ಷೆಗೆ ಒಳಗಾಗುತ್ತಾರೆ. ಇವುಗಳನ್ನು ಬುಡ ಸಮೇತ ಕಿತ್ತೊಗೆಯಲು ಇಲಾಖೆಗಳೊಂದಿಗೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನೆ ಇವರ ಸಂಯುಕ್ತಾಶ್ರಯದಲ್ಲಿ ಜೀತ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ, ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ನಗರದ ಹಳೆಯ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಯಾವುದೇ ಕಾರಣಕ್ಕೂ ಮಕ್ಕಳನ್ನು ಕೆಲಸಕ್ಕೆ ಇಟ್ಟುಕೊಳ್ಳಬಾರದು. ಅವರನ್ನು ಶಿಕ್ಷಣವಂತರನ್ನಾಗಿ ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಜೀತ ಕಾರ್ಮಿಕ ಪದ್ಧತಿ, ಬಾಲಕಾರ್ಮಿಕ ಪದ್ಧತಿಗಳು ಕಂಡುಬಂದರೆ ತಕ್ಷಣವೇ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಗಮನಕ್ಕೆ ತಂದರೆ ಅಂತಹ ಪ್ರಕರಣಗಳನ್ನು ತಡೆಗಟ್ಟಿ ತಪ್ಪಿಸ್ಥರನ್ನು ಶಿಕ್ಷೆಗೆ ಒಳಪಡಿಸಲಾಗುವುದು ಎಂದರು.

ಜೀತ ಪದ್ಧತಿ, ಬಾಲಕಾರ್ಮಿಕ, ಬಾಲ್ಯ ವಿವಾಹದಂತಹ ಅನಿಷ್ಟ ಪದ್ಧತಿಗಳನ್ನು ನಿರ್ಮೂಲನೆಗೆ ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯ ಹಾಗೂ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವಂತಾಗಬೇಕು ಎಂದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, 14 ವರ್ಷದೊಳಗಿನ ಮಕ್ಕಳನ್ನು ದುಡಿಮೆಗೆ ಬಳಸಿಕೊಳ್ಳುವುದು ಕಾನೂನು ಬಾಹಿರವಾಗಿದೆ. ಮಕ್ಕಳಿಗೆ ಶಿಕ್ಷಣ ಕೊಡಿಸಬೇಕು. ಶಿಕ್ಷಣದಿಂದ ಮಾತ್ರ ಜೀತ ಪದ್ಧತಿ ಸಂಪೂರ್ಣ ನಿರ್ಮೂಲನೆ ಮಾಡಲು ಸಾಧ್ಯ ಎಂದು ತಿಳಿಸಿದರು. ಸಂವಿಧಾನವು ಪ್ರತಿಯೊಬ್ಬರಿಗೂ ಘನತೆಯಿಂದ ಬದುಕುವ ಹಕ್ಕು ನೀಡಿದೆ. ಸರ್ಕಾರವು ಶಿಕ್ಷಣ ಸೇರಿದಂತೆ ಹಲವಾರು ಸೌಲಭ್ಯಗಳನ್ನು ನೀಡುತ್ತಿದೆ. ಇವುಗಳ ಸದ್ಬಳಕೆಯಾಗಬೇಕು ಎಂದು ಹೇಳಿದರು.

'ರ್ಭದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಜಿಲ್ಲಾ ಬಾಲ ಕಾರ್ಮಿಕ ಯೋಜನೆಯ ಯೋಜನಾಧಿಕಾರಿ ಎ.ಮೌನೇಶ್, ಕಾರ್ಮಿಕ ಅಧಿಕಾರಿ ಸಿದ್ದಪ್ಪ ಖೈನೂರ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಶಾಲಾ ಮಕ್ಕಳು, ಮತ್ತಿತರರು ಉಪಸ್ಥಿತರಿದ್ದರು.

# ಯುವನಿಧಿ ಪ್ಲಸ್ ಅರಿವು ಕಾರ್ಯಕ್ರಮ



ದಾವಣಗೆರೆ ಫೆ.20-

ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ಆರ್ಥಿಕ ಸ್ಥಿರತೆಯನ್ನು ಬಲಪಡಿಸುವಲ್ಲಿ ಪಂಚಗ್ಯಾರಂಟಿ ಯೋಜನೆಗಳು ಮಹತ್ವದ ಪಾತ್ರವಹಿಸುತ್ತದೆ ಎಂದು ಜಿಲ್ಲಾ ಪಂಚ ಗ್ಯಾರಂಟಿ ಯೋಜನೆಯ ಅಧ್ಯಕ್ಷರಾದ ಶಾಮನೂರು.ಟಿ.ಬಸವರಾಜ್ ಹೇಳಿದರು.

ಬುಧುವಾರ(ಫೆ.18) ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮತ್ತು ಜಿಲ್ಲಾ ಕೌಶಲ್ಯಾಭಿವೃದ್ದಿ ನಿಗಮದಿಂದ ಆಯೋಜಿಸಲಾಗಿದ್ದ ಯುವನಿಧಿ ಪ್ಲಸ್ ಅರಿವು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು

ಯುವನಿಧಿ ಯೋಜನೆಯ ಬಗ್ಗೆ ನೀವೆಲ್ಲರೂ ಕೇಳಿರುತ್ತೀರಿ. ಈ ಯೋಜನೆಯನ್ನು ಇನ್ನಷ್ಟು ಜನರಿಗೆ ತಲುಪಿಸುವ ಉದ್ದೇಶದಿಂದ ಹಾಗೂ ಯುವಕರಿಗೆ ಕೌಶಲ್ಯ ತರಬೇತಿ ನೀಡಿ ಅವರಲ್ಲಿ ಉದ್ಯಮಶೀಲತೆಯನ್ನು ಬೆಳೆಸುವ ಉದ್ದೇಶದಿಂದ ಯುವನಿಧಿ ಪ್ಲಸ್ ಎಂಬ ಹೊಸ ಉಪಕ್ರಮವನ್ನು ಜಾರಿಗೆ ತಂದಿದೆ.

ಇದು ಕೇವಲ ನಿರುದ್ಯೋಗ ಭತ್ಯೆ ನೀಡುವುದಲ್ಲದೇ ಯುವಕರಿಗೆ ಉದ್ಯೋಗಕ್ಕೆ ಪೂರಕವಾದ ಉನ್ನತ ಮಟ್ಟದ ಕೌಶಲ್ಯ ತರಬೇತಿಯನ್ನು ನೀಡುವ ಮೂಲಕ ಅವರನ್ನು ಸ್ವಾವಲಂಬಿಗಳನ್ನಾಗಿ ಮಾಡುತ್ತದೆ.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧ???ವಿಠ್ಠ???ರಾವ್ ಮಾತನಾಡಿ ಪದವೀಧರರು ಮತ್ತು ಡಿಪ್ಲೊ??ಮಾ ನಿರುದ್ಯೋಗಿ ಯುವಕರಿಗೆ ಆರ್ಥಿಕ ಭದ್ರತೆ ನೀಡಲು ಪದವೀಧರರಿಗೆ ಮಾಸಿಕ ರೂ.3,000 ಹಾಗೂ ಡಿಪ್ಲೊ??ಮಾ ಹೊಂದಿದವರಿಗೆ ರೂ.1,500 ಸ್ಟೈಫಂಡ್ ನೀಡಲಾಗುತ್ತಿದೆ. ಇದೀಗ ಈ ಯೋಜನೆಯನ್ನು ಮುಂದಿನ ಹಂತಕ್ಕೆ ಕೊಂಡೊಯ್ಯಲು ಯುವನಿಧಿ ಪ್ಲಸ್ ಎಂಬ ಹೊಸ ಉಪಕ್ರಮವನ್ನು ಸರ್ಕಾರ ಆರಂಭಿಸಿದೆ. ಯುವನಿಧಿ ಯೋಜನೆಯಡಿ ನೋಂದಾಯಿತರಾಗಿರುವ ಅಭ್ಯರ್ಥಿಗಳಿಗೆ ಉದ್ಯೋಗದ ಅವಕಾಶಗಳನ್ನು ಹೆಚ್ಚಿಸಲು ಉಚಿತವಾಗಿ ಕೌಶಲ್ಯ ತರಬೇತಿ ನೀಡುವ ಕಾರ್ಯಕ್ರಮವೇ ಯುವನಿಧಿ ಪ್ಲಸ್. ಈ ತರಬೇತಿ ಯೋಜನೆಯ ಉದ್ದೇಶವು ಉದ್ಯೋಗ ಪಡೆಯಲು ಪೂರಕವಾಗುವ ತಾಂತ್ರಿಕ ಹಾಗೂ ಕೈಗಾರಿಕಾ ಆಧಾರಿತ ಕೌಶಲ್ಯಗಳನ್ನು ಯುವಕರಿಗೆ ಕಲಿಸಲಾಗುತ್ತದೆ.

ನಿರುದ್ಯೋಗಿಗಳಿಗೆ ಆರ್ಥಿಕ ಆಸರೆ ಉದ್ಯೋಗವಿಲ್ಲದೆ ಸಂಕಷ್ಟದಲ್ಲಿರುವ ಯುವಜನರಿಗೆ ಪ್ರತಿ ತಿಂಗಳು ಆರ್ಥಿಕ ನೆರವು ನೀಡುವ ಮೂಲಕ ಅವರ ದೈನಂದಿನ ಅವಶ್ಯಕತೆಗಳನ್ನು ಪೂರೈಸಿಕೊಳ್ಳಲು ಇದು ಸಹಾಯ ಮಾಡುತ್ತದೆ. ಯುವಕರು ಕೇವಲ ಉದ್ಯೋಗ ಹುಡುಕುವವರಾಗದೆ, ತಮ್ಮದೇ ಆದ ಸಣ್ಣ ಉದ್ಯಮಗಳನ್ನು ಪ್ರಾರಂಭಿಸಲು ಮತ್ತು ಸ್ವಯಂ ಉದ್ಯೋಗಿಗಳಾಗಲು ಬೇಕಾದ ಆತ್ಮವಿಶ್ವಾಸ ಮತ್ತು ತರಬೇತಿಯನ್ನು ನೀಡುತ್ತದೆ. ಇತರರ ಮೇಲೆ ಅವಲಂಬಿತವಾಗುವುದನ್ನು ಕಡಿಮೆ ಮಾಡುವ ಮೂಲಕ ಇದು ಯುವಕರಲ್ಲಿ ಸ್ವಾಭಿಮಾನವನ್ನು ಮೂಡಿಸುತ್ತದೆ. ಇದು ಸಮಾಜದಲ್ಲಿ ಸ್ಥಿರತೆಯನ್ನು ತರುತ್ತದೆ. ಈ ಯೋಜನೆಯ ಹಣವು ಯಾವುದೇ ಮಧ್ಯವರ್ತಿಗಳಿಲ್ಲದೆ ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮಾ ಆಗುವುದರಿಂದ, ಹಣದ ದುರುಪಯೋಗ ತಪ್ಪುತ್ತದೆ ಎಂದರು.

ಫೆಬ್ರವರಿ 23 ರಂದು ನಡೆಯುವ ಬೃಹತ್ ಉದ್ಯೋಗಮೇಳದ ಬ್ಯಾನರ್ ಬಿಡುಗಡೆಗೊಳಿಸಲಾಯಿತು. ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಗಣೇಶ್. ಆರ್, ಪ್ರಾಂಶುಪಾಲರಾದ ಏಕನಾಥ.ಎನ್, ಲೀಡ್ ಬ್ಯಾಂಕ್ ವ್ಯವಸ್ಥಾಪಕರಾದ ಹಿರೇಮಠ್, ಜಿಲ್ಲಾ ಕೌಶಲ್ಯಾಭಿವೃದ್ದಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ದೇಶ, ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ.ಡಿ ಹಾಗೂ ಗ್ಯಾರಂಟಿ ಯೋಜನೆಯ ಉಪಾಧ್ಯಕ್ಷರು ಸದಸ್ಯರು ಉಪಸ್ಥಿತರಿದ್ದರು.

## ಒಂದನೇಯ ಪುಟದಿಂದ

### ಜಿಲ್ಲಾಡಳಿತದಿಂದ ಸರ್ವಜ್ಞ ಜಯಂತಿ ಆಚರಣೆ
## ಸಂತಕವಿ ಸರ್ವಜ್ಞ ಕನ್ನಡ ನಾಡಿನ ಸಂಪತ್ತು: ವೈ ಸುರೇಂದ್ರಬಾಬು ಕುಂಬಾರ

ವಚನಗಳ ಮೂಲಕ ಉತ್ತಮ ಸಂದೇಶ ನೀಡಿದರು. ಸಮಾಜ ಇನ್ನಷ್ಟು ಅಭಿವೃದ್ಧಿಯಾಗಲು ಸಮಾಜದ ಜನರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು ಎಂದು ಸಲಹೆ ಮಾಡಿದರು.

ಸಮಾರಂಭದಲ್ಲಿ ಗ್ರೇಡ್ 2 ತಹಸೀಲ್ದಾರ ಪರಶುರಾಮು, ಸಮಾಜದ ಪ್ರಮುಖರಾದ ಶಿವರಾಜಪ್ಪ, ವೀರಭದ್ರಪ್ಪ, ಬಸವರಾಜ, ಶಿವಪ್ರಕಾಶ, ಭೀಮಪ್ಪ, ಲಕ್ಷ್ಮಿರೆಡ್ಡಿ, ತಿಮ್ಮಪ್ಪ, ಬಸವರಾಜ, ರಮೇಶ, ನರಸಿಂಗಪ್ಪ, ಸಾಯಿಬಾಬಾ ಹಾಗೂ ಇತರರು ಇದ್ದರು.

## ನ್ಯೂನ್ಯತೆಯುಳ್ಳ ಮಕ್ಕಳಿಗೆ ತಜ್ಞ ವೈದ್ಯರಿಂದ ತಪಾಸಣೆ ಶಿಬಿರ

ಚಿಕಿತ್ಸೆ : ಜನ್ಮಾಜಾತ ಹೃದಯ ಸಂಬಧಿ ಖಾಯಿಲೆಗಳ ತುರ್ತು ಶಸ್ತ್ರಚಿಕಿತ್ಸೆ ಗಳಿಗಾಗಿ ಸರಕಾರದೊಂದಿಗೆ ಒಡಂಬಡಿಕೆ ಮಾಡಿಕೊಂಡ ಬೆಂಗಳೂರಿನ ಆಸ್ಪತ್ರೆಗಳಿಗೆ ಕಳುಹಿಸಲಾಗುತ್ತಿದೆ.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರಬಾಬು ಮಾತನಾಡಿ, ಪಾಲಕರು ತಮ್ಮ ಮಗುವಿಗೆ ಆರೋಗ್ಯ ಸಮಸ್ಯೆಗಳಿಗೆ ಹಲವು ಬಾರಿ ಖಾಸಗಿ ಆಸ್ಪತ್ರೆಗಳಿಗೆ ತೆರಳಿ ಲಕ್ಷಾಂತರ ರೂಪಾಯಿ ವೆಚ್ಚ ಮಾಡಿ ಆರ್ಥಿಕ ತೊಂದರೆಗೊಳಗಾಗುವುದನ್ನು ತಪ್ಪಿಸಲು ಸರಕಾರ ಅನುಷ್ಠಾನ ಮಾಡಿರುವ ಯೋಜನೆ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮವಾಗಿದೆ. ಮಕ್ಕಳ ಜನನದ ನಂತರದ ಆರಂಭದಲ್ಲಿ ಕಂಡು ಬರುವ ಬೆಳವಣಿಗೆಗೆ ಕುಂಠಿತವಾಗುವ ಗಂಭೀರ ಆರೋಗ್ಯ ಸಮಸ್ಯೆಗಳಾದ ಜನ್ಮಾಜಾತ ಹೃದಯ ಸಂಬಧಿ ಖಾಯಿಲೆಗಳು (ಸಿಹೆಚ್‌ಡಿ), ಸೀಳು ತುಟಿ, ವಕ್ರಪಾದ, ಮಾನಸಿಕ ಆರೋಗ್ಯ ಸಮಸ್ಯೆಗಳು, ಸೀಳು ಅಂಗಳ, ಕೀವಿ ಕೇಳದಿರುವುದು, ದೈಹಿಕ ನ್ಯೂನ್ಯತೆಗಳಿರುವವರಿಗೆ ಪೀಜಿಯೋಥೆರಪಿ ಸೇರಿದಂತೆ ಮಗುವಿನ ಬೆಳವಣಿಗೆಗೆ ಅಡ್ಡಿಪಡಿಸುವ ಆರೋಗ್ಯ ಸಮಸ್ಯೆಗಳಿಗೆ ರಾಷ್ಟ್ರೀಯ ಬಾಲ್ಯ ಸ್ವಾಸ್ಥ ಕಾರ್ಯಕ್ರಮದಡಿ ಮಕ್ಕಳಿಗೆ ಉಚಿತ ಪರೀಕ್ಷೆ, ಅಗತ್ಯವಿರುವ ಚಿಕಿತ್ಸೆ ಹಾಗೂ ಶಸ್ತ್ರಚಿಕಿತ್ಸೆ ಸಹ ಕೈಗೊಳ್ಳಲಾಗುತ್ತಿದ್ದು ಪಾಲಕರು ನೆಮ್ಮದಿಯಿಂದ ತಮ್ಮ ಮುದ್ದು ಮಗುವಿನ ಸಂತಸದ ಕ್ಷಣಗಳನ್ನು ಆಸ್ವಾದಿಸಲು ಸಾಧ್ಯವಾಗುತ್ತಿದೆ ಎಂದು ತಿಳಿಸಿದರು.

ಸಿಹೆಚ್‌ಡಿ ಪತ್ತೆಗಾಗಿ ರಾಯಚೂರು ಜಿಲ್ಲೆಯಲ್ಲಿ ಓಪೆಕ್ ಸೂಪರ್ ಸ್ಪೆಶಾಲಿಟಿ ಆಸ್ಪತ್ರೆಯೊಂದಿಗೆ ಇಕೊ ಟೆಸ್ಟ್ ಮಾಡಲು ಒಪ್ಪಂದ ಮಾಡಿಕೊಳ್ಳಲಾಗಿದ್ದು, ಇದರಿಂದ ಸಮಯ ಉಳಿತಾಯವಾಗಲಿದೆ. ಎಲ್ಲ ತಾಲೂಕುಗಳಲ್ಲಿ ಗುರುತಿಸಲ್ಪಟ್ಟ ಸಮಸ್ಯೆ ಇರುವ ಮಕ್ಕಳನ್ನು ಇಲ್ಲಿ ತಪಾಸಣೆ ಮಾಡಲಾಗುವುದು ಎಂದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದೀತಾ ಎಮ್ ಎನ್ ಮಾತನಾಡಿ, ಜಿಲ್ಲೆಯಲ್ಲಿ ನವಜಾತ ಶಿಶುಗಳ ಕುಂಠಿತ ಬೆಳವಣಿಗೆಗೆ ಕಾರಣವಾಗುವ ಗಂಭೀರ ಸಮಸ್ಯೆಗಳಿಗೆ ಪಾಲಕರಿಗೆ ಆರ್ಥಿಕ ಹೊರೆಯನ್ನು ತಪ್ಪಿಸಿ ಅಗತ್ಯ ವೈದ್ಯಕೀಯ ಪರೀಕ್ಷೆ, ಚಿಕಿತ್ಸೆ , ಅನುಸರಣೆ ಕೈಗೊಂಡು ನೆಮ್ಮದಿಯ ಭವಿಷ್ಯಕ್ಕೆ ನಿಮ್ಮ ಆರೋಗ್ಯ - ನಮ್ಮ ಆಧ್ಯತೆ ಎಂಬ ಧ್ಯೇಯದಂತೆ ಕಾರ್ಯನಿರ್ವಹಿಸಲಾಗುತ್ತಿದೆ ಎಂದು ತಿಳಿಸಿದರು.

ಇಂದಿನ ತಪಾಸಣೆ ವೇಳೆ ಡಾ.ಸಂಧ್ಯಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ, ಹಿರಿಯ ಶುಶ್ರೂಷಣಾಧಿಕಾರಿ ಸಲೋಮಿ, ಡಿವೈಹೆಚ್‌ಇಓ ಬಸಯ್ಯ, ಡಿಪಿಎಮ್ ನವೀನ್‌ಕುಮಾರ, ಆರ್‌ಬಿಎಸ್‌ಕೆ ಕಲ್ಸ್ಲಂಟ್ ಸಿದ್ದಮ್ಮ, ಬಿಹೆಚ್‌ಇಓ ಸರೋಜಾ ಕೆ, ಡಿಇಐಸಿ ತಂಡದ ಸಿಬ್ಬಂದಿ ಉಪಸ್ಥಿತರಿದ್ದರು.

## ಎಮ್ ಇಂಗ್ಲಿಷ್ ಮಾಧ್ಯಮ ಪೂರ್ವ ಪ್ರಾಥಮಿಕ ಶಾಲೆಯಲ್ಲಿ 3 ನೇ ವರ್ಷದ ವಾರ್ಷಿಕೋತ್ಸವ

ಮಾತ್ರ ಸಂಸ್ಥೆಗಳು ಬೆಳೆಯಲು ಸಾಧ್ಯವಾಗುತ್ತದೆ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಸಹಕಾರಿ ಯಾಗುತ್ತದೆ. ಶಿಕ್ಷಣ ಎನ್ನುವುದು ಹುಲಿ ಹಾಲಿನಂತೆ ಕುಡಿದವರು ಘರ್ಜಿಸುತ್ತಾರೆ. ಪಟ್ಟಣದ ಖಾಸಗಿ ಶಾಲೆಗಳ ಸಹಕಾರಕ್ಕೆ ಸದಾ ಕಾಲ ಇರುತ್ತೇವೆ ಎಂದರು. ಮಾಡೆಲ್ ಶಾಲೆಯ ಅಧ್ಯಕ್ಷ ಬಿ ಎ. ಕರೀಂ ಸಾಬ್, ತಿಮ್ಮಣ್ಣ ಕಾರ್ಯಕ್ರಮ ಕುರಿತು ಮಾತನಾಡಿದರು. ಈ ಸಂದರ್ಭದಲ್ಲಿ ಶಾಲೆ ಸಂಸ್ಥಾಪಕಿ ಸುಮಿತಾ ರಮೇಶ ಸಾನಬಾಳ, ವರದಿಗಾರ ಸಂಘದ ತಾಲೂಕು ಉಪಾಧ್ಯಕ್ಷ ಗಂಗಪ್ಪ ದಿನ್ನಿ, ವಿಜಯ ಭಾಸ್ಕರ ಕೋಸ್ಗಿ, ಇಮ್ರಾನ್ ರಾಯಚೂರು, ರಮೇಶ ಸಾನಬಾಳ, ವೆಂಕಟೇಶ, ಹನುಮಂತ್ರಯ, ಎಮ್ ಪೂರ್ವ ಪ್ರಾಥಮಿಕ ಶಾಲೆಯ ಸಹ ಶಿಕ್ಷಕಿಯರಾದ ಉಮಾ, ಸುಧಾ, ಸುರೇಖಾ, ಶಾಂತಮ್ಮ, ಜ್ಯೋತಿ, ರತ್ನಮ್ಮ, ರೂಪ, ಪವಿತ್ರ, ಉಮಾದೇವಿ, ದೇವಮ್ಮ ಮತ್ತು ಪಾಲಕರು ಹಾಗೂ ಮಕ್ಕಳು ಇದ್ದರು.

ಮಕ್ಕಳ ಸಾಂಸ್ಕೃತಿಕ ಜೊತೆಗೆ ಪಾಲಕರ ನೃತ್ಯ ಕಾರ್ಯಕ್ರಮಗಳು ನೋಡದರ ಗಮನ ಸೆಳೆದವು.

ಈರಪ್ಪ ಮಲ್ಲಪ್ಪ ಐಕೂರ್ ಎಜುಕೇಶನಲ್ ಅಂಡ್ ಚಾರಿಟೇಬಲ್ ಟ್ರಸ್ಟ್ ಅಡಿಯಲ್ಲಿ

## ಫೆ21 ಕ್ಕೆ ವಿರಾಟ್ ಹಿಂದೂ ಸಮ್ಮೇಳನ-ಶೋಭಾಯಾತ್ರೆ; ಲೋಕರಡ್ಡಿ

ಸಿರವಾರ,ಫೆ.20-

ವಿರಾಟ್ ಹಿಂದೂ ಸಮ್ಮೇಳನ ಸಮಿತಿ ವತಿಯಿಂದ 'ವಿರಾಟ್ ಹಿಂದೂ ಸಮ್ಮೇಳನ' ವನ್ನು ಪಟ್ಟಣದಲ್ಲಿ ಫೆ21 ಶನಿವಾರ ಹಮ್ಮಿಕೊಳ್ಳಲಾಗಿದೆ ಎಂದು ಸಮ್ಮೇಳನ ಸಮಿತಿ ಅಧ್ಯಕ್ಷ ಜಿ.ಲೋಕರಡ್ಡಿ ಹೇಳಿದರು. ವಿರಾಟ್ ಹಿಂದೂ ಸಮ್ಮೇಳನದ ಅಂಗವಾಗಿ ಪಟ್ಟಣದ ಶ್ರೀ ಬಸವೇಶ್ವರ ವೃತ್ತದಿಂದ ವಿವಿಧ ವಾದ್ಯ ಮೇಳ ಮತ್ತು ಪ್ರದರ್ಶನಗಳನ್ನು,



ನಾಡಿನ ವಿವಿಧ ಸಮಾಜ ಸುಧಾರಕರು, ಮಹನೀಯರ ವೇಷ ಭೂಷಣ ಹಾಕಿರುವ ಮಕ್ಕಳನ್ನು,101 ಕಳಸ ಹಿಡಿದ ಮುತ್ತೈದೆಯರನ್ನು ಒಳಗೊಂಡ ಬೃಹತ್ ಶೋಭಾಯಾತ್ರೆಯು ವೇದಿಕೆಯ ಸ್ಥಳ ಬಸ್ ನಿಲ್ದಾಣದ ಬಳಿ ಇರುವ ಜಾಡಲದಿನ್ನಿ ಗೌಡರ ಜಾಗದವರೆಗೆ ಸಾಗಲಿದೆ.

ನಂತರ ವೇದಿಕೆಯ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ಮತ್ತು ನೇತೃತ್ವವನ್ನು ಪೂಜ್ಯ ಶ್ರೀ ಅಭಿನವ ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು ಬೃಹನ್ಮಠ ನವಲಕಲ್ ವಹಿಸಲಿದ್ದಾರೆ.

ನೀಲಗಲ್ ಬೃಹನ್ಮಠದ ಪೂಜ್ಯ ಶ್ರೀ ರೇಣುಕ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು, ಚೀಕಲಪರ್ವಿ ಯ ಶ್ರೀ ರುದ್ರಮುನೀಶ್ವರ ಮಠದ ಪೂಜ್ಯ ಶ್ರೀ ಸದಾಶಿವ ಮಹಾಶಿವಯೋಗಿಗಳು, ಕಲ್ಲೂರಿನ ಶಂಕರಾಚಾರ್ಯರ ಮಠದ ಪೂಜ್ಯ ಶ್ರೀ ಶಿವರಾಮಾನಂದ ಸ್ವಾಮೀಜಿ ಸಾನ್ನಿಧ್ಯ ವನ್ನು ವಹಿಸಲು ಆಗಮಿಸುತ್ತಿದ್ದಾರೆ.ವಿಶೇಷ ಉಪನ್ಯಾಸಕರಾಗಿ ವಿಶ್ವ ಹಿಂದೂ ಪರಿಷತ್ ನ ಕ್ಷೇತ್ರೀಯ ಅರ್ಚಕ ಪುರೋಹಿತ ಪ್ರಮುಖ್ ಬಸವರಾಜ ಜಿ ಅವರು ಆಗಮಿಸಲಿದ್ದಾರೆ. ಆದ ಕಾರಣ ಹೆಚ್ಚಿನ ಸಂಖ್ಯೆಯಲ್ಲಿ ಶೋಭಾಯಾತ್ರೆ ಮತ್ತು ಕಾರ್ಯಕ್ರಮದಲ್ಲಿ ಭಾಗವಹಿಸಿ ಶೋಭೆಯನ್ನು ತರಬೇಕು ಎಂದು ವಿರಾಟ್ ಹಿಂದೂ ಸಮ್ಮೇಳನ ಸಮಿತಿ ಅಧ್ಯಕ್ಷ ಜಿ ಲೋಕರಡ್ಡಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.



ರಾಯಚೂರು: ಇಂದು ಭಾರತೀಯ ಜನತಾ ಪಾರ್ಟಿ. ನಗರ ಮಂಡಲ ಅಲ್ಪಸಂಖ್ಯಾತ ಮೋರ್ಚಾದ. ಸಿಂಧನೂರು ವಿಧಾನಸಭಾ ಕ್ಷೇತ್ರದ ವತಿಯಿಂದ. ಸಿಂಧನೂರು ನಗರಸಭೆ ವ್ಯಾಪ್ತಿಯಲ್ಲಿ ಬರುವ ವಾರ್ಡ್ ನಂಬ್ರ 31. ಏಳುರಾಗಿ ಕ್ಯಾಂಪಿನಲ್ಲಿ. ಘನ ತ್ಯಾಜ್ಯ. ವಿಲೇವಾರಿ. ಚರಂಡಿ ಸ್ವಚ್ಛತೆ ಬೀದಿ ದೀಪಗಳ ಸರಿಯಾದ ನಿರ್ವಹಣೆ. ನಗರದ. ಪಿಡಬ್ಲ್ಯೂ ಡಿ. ಕ್ಯಾಂಪ್. ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಮುಂಭಾಗದಲ್ಲಿ. ಲೈಟ್ ಗಳ.ಅಳವಡಿಕೆ. ಹಾಗೂ ಇನ್ನಿತರ ಬೇಡಿಕೆಗಳನ್ನು ಮುಂದಿಟ್ಟುಕೊಂಡು. ಸಿಂಧನೂರು ನಗರ ಮಂಡಲ ಅಲ್ಪಸಂಖ್ಯಾತ ಮೋರ್ಚಾದ. ಅಧ್ಯಕ್ಷರಾದ. ರಾಜು ಅಡವಿ ಬಾವಿಯವರು. ನಗರಸಭೆ ಪೌರಾಯುಕ್ತರಿಗೆ. ಮನವಿ ಸಲ್ಲಿಸಿದರು.



ರಾಯಚೂರು: ಜಿಲ್ಲಾ ಆಡಳಿತ.ಜಿಲ್ಲಾ ಪಂಚಾಯತ್. ಮಹಾನಗರ ಪಾಲಿಕೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಯಚೂರ.ಇವರಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯ ಕಾರ್ಯಕ್ರಮದಲ್ಲಿ ಕರ್ನಾಟಕ ಸರ್ಕಾರದ ಸಣ್ಣ ನೀರಾವರಿ ಮತ್ತು ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್ ಎಸ್ ಭೂಸರಾಜ್ ರವರು ಛತ್ರಪತಿ ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಪೂಜಾ ಮತ್ತು ಪುಷ್ಪಾರ್ಪಣೆ ಕಾರ್ಯಕ್ರಮವನ್ನು ನೆರವೇರಿಸಿದರು. ಈ ಸಂದರ್ಭದಲ್ಲಿ ಮಮ್ಮದ್ ಶಾಲಂ ಜಯಣ್ಣ. ರಮೇಶ್. ನರಸಪ್ಪ ಯಕ್ಲಾಸಪೂ.ಜಿಂದಪ್ಪ.ಸಮಾಜದ ಹನುಮಂತ್ ರಾವ್ ಜಗತಾಪ ನಿರ್ಮಲ ಬೆಣ್ಣೆ . ಡಾ. ದಂಡಪ್ಪ ಬಿರಾದಾರ ಡಾ. ಸಾಬಣ್ಣ ಪಾಗುಂಟಪ್ಪ ಮಿರ್ಜಾಪುರ ಪಿ ಸುರೇಖಾ ಸೇರಿದಂತೆ ಇನ್ನಿತರ ರು ಉಪಸ್ಥಿತರಿದ್ದರು.

### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆ
# ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಅಭಾವ ಆಗದಂತೆ ಮುಂಜಾಗ್ರತೆ ವಹಿಸಿ-ಡಿಸಿ ನಾಗೇಂದ್ರ ಪ್ರಸಾದ್.ಕೆ



ಬಳ್ಳಾರಿ,ಫೆ.20-

ಬೇಸಿಗೆ ಆರಂಭವಾಗಲಿದ್ದು, ಜಿಲ್ಲೆಯಲ್ಲಿ ಜನ- ಜಾನುವಾರುಗಳಿಗೆ ಕುಡಿಯುವ ನೀರು, ಮೇವು ಕೊರತೆಯಾಗದಂತೆ ಮುಂಜಾಗ್ರತೆ ವಹಿಸಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಗುರುವಾರ, ನಗರದ ನೂತನ ಜಿಲ್ಲಾಡಳಿತ ಭವನದ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಏರ್ಪಡಿಸಿದ್ದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೇಸಿಗೆ ಹಿನ್ನೆಲೆಯಲ್ಲಿ ಜಿಲ್ಲೆಯ ಬಳ್ಳಾರಿ ತಾಲ್ಲೂಕಿನಲ್ಲಿ 21, ಕಂಪ್ಲಿ-16, ಕುರುಗೋಡು-15, ಸಂಡೂರು-3, ಸಿರುಗುಪ್ಪ ತಾಲ್ಲೂಕಿನ 28 ಗ್ರಾಮಗಳು ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 83 ಗ್ರಾಮಗಳಲ್ಲಿ ಬೇಸಿಗೆಯಲ್ಲಿ ಒಂದು ವೇಳೆ ಮಳೆ ಬಾರದಿದ್ದರೆ, ನೀರಿನ ಸಮಸ್ಯೆ ಉದ್ಭವಿಸಬಹುದು ಎಂದು ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯು ಅಂದಾಜಿಸಿದ್ದು, ಈ ಕೂಡಲೇ ಅಂತಹ ಗ್ರಾಮಗಳಲ್ಲಿ ಕುಡಿಯುವ ನೀರಿನ ಪೂರೈಕೆಗೆ ಅಗತ್ಯ ಮುಂಜಾಗ್ರತಾ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಕುಡಿಯುವ ನೀರಿಗೆ ಸಮಸ್ಯೆಯಾಗಬಹುದಾದ ಗ್ರಾಮಗಳಲ್ಲಿ ಸರ್ಕಾರಿ ಬೋರ್‌ವೇಲ್ ಗಳನ್ನು ಗುರುತಿಸಿ, ಒಂದು ವೇಳೆ ಕೆಟ್ಟಿದ್ದಲ್ಲಿ, ರಿಪೇರಿ ಕೈಗೊಳ್ಳಬೇಕು. ನಂತರ ಖಾಸಗಿ ಬೋರ್‌ವೆಲ್ ಗಳನ್ನು ಕೂಡ ಗುರುತಿಸಿಟ್ಟುಕೊಳ್ಳಬೇಕು. ಇಲ್ಲವಾದಲ್ಲಿ ಹೊಸ ಬೋರ್ ವೆಲ್ ಕೊರೆಸಲು ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಒಟ್ಟು 504 ಆರ್‌ಓ ಘಟಕಗಳಿದ್ದು, 454 ಕಾರ್ಯನಿರ್ವಹಿಸುತ್ತಿವೆ. ಉಳಿದ 54 ಆರ್‌ಓ ಘಟಕಗಳ ನಿರ್ವಹಣೆಗೆ ಕ್ರಮವಹಿಸಬೇಕು ಎಂದರಲ್ಲದೇ, ಕುಡಿಯುವ ನೀರು ಎಲ್ಲೂ ಕಲುಷಿತಗೊಳ್ಳದಂತೆ ಎಚ್ಚರವಹಿಸಬೇಕು ಎಂದು ನಿರ್ದೇಶನ ನೀಡಿದರು. ನಗರ ಮತ್ತು ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರು ಸಮಸ್ಯೆಯಾದಲ್ಲಿ ನೀರಿನ ಟ್ಯಾಂಕರ್ ಇರಿಸಿಕೊಳ್ಳಬೇಕು. ಮುಖ್ಯವಾಗಿ ಟ್ಯಾಂಕರ್ ಗಳ ಸ್ಥಿತಿ ಪರಿಶೀಲಿಸಬೇಕು ಎಂದು ಸೂಚನೆ ನೀಡಿದರು.

ಮೇವು ದಾಸ್ತಾನು ಇಟ್ಟುಕೊಳ್ಳಿ:

ಜಿಲ್ಲೆಯಲ್ಲಿ ಈ ಬಾರಿ ಎರಡನೇ ಬೆಳೆ ಇಲ್ಲವಾದುದರಿಂದ ಜಾನುವಾರುಗಳಿಗೆ ಮೇವಿನ ಸಮಸ್ಯೆ ಉಲ್ಬಣಗೊಳ್ಳದಂತೆ ಅಗತ್ಯ ಮೇವಿನ ದಾಸ್ತಾನು ಇಟ್ಟುಕೊಳ್ಳಲು ಕ್ರಮ ಕೈಗೊಳ್ಳಬೇಕು ಎಂದು ಪಶುಸಂಗೋಪನಾ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ರಾಜ್ಯ ವಿಪತ್ತು ಉಪಶಮನ ನಿಧಿಯಡಿ ಬಾಕಿ ಇರುವ ಕಾಮಗಾರಿಗಳನ್ನು ಕೂಡಲೇ ಪೂರ್ಣಗೊಳಿಸಬೇಕು ಎಂದು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದ ಅವರು, ಜಿಲ್ಲೆಯಲ್ಲಿ ಮೇವಿನ ದಾಸ್ತಾನು(ಬಣವೆ), ಅರಣ್ಯ ಭಾಗದಲ್ಲಿ ಕಾಳ್ಗಿಚ್ಚು ಉಂಟಾಗಂತೆ ಎಚ್ಚರವಹಿಸಬೇಕು. ಘಟನೆ ಸಂಭವಿಸಿದಲ್ಲಿ ಶಮನಗೊಳಿಸಲು ಸಿದ್ದರಿರಬೇಕು ಎಂದು ಅಗ್ನಿಶಾಮಕ ಅಧಿಕಾರಿಗಳಿಗೆ ತಿಳಿಸಿದರು.

ಬಿಸಿಲಿನ ತಾಪಮಾನದ ಅಲೆ ಕುರಿತು ಜಾಗೃತಿ ಮೂಡಿಸಿ:

ಜಿಲ್ಲೆಯಲ್ಲಿ ಮಾರ್ಚ್ ಅಂತ್ಯದಿಂದ ಮೇ ಅಂತ್ಯದವರೆಗೆ ಬಿಸಿಲಿನ ತಾಪಮಾನ ಅಲೆಗಳ ಪ್ರಖರತೆ ಹೆಚ್ಚಾಗುವ ಸಂಭವವಿದೆ ಎಂದು ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆ ಇದ್ದು, ಸತತ ಮೂರು ದಿನಗಳ ಕಾಲ 40 ಡಿಗ್ರಿ ಸೆಲ್ಸಿಯಸ್ ನಿರಂತರವಾಗಿ ತಾಪಮಾನ ಇದ್ದಲ್ಲಿ ಬಿಸಿಲಿನ ತಾಪಮಾನ ಅಲೆಗಳು ಎಂದು ಪರಿಗಣಿಸುವಂತೆ ಹವಾಮಾನ ಇಲಾಖೆ ತಿಳಿಸಿದೆ. ಈ ಕುರಿತು ಸಾರ್ವಜನಿಕರಿಗೆ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಜಾಗೃತಿ ಕಾರ್ಯಕ್ರಮಗಳ ಮೂಲಕ ಅರಿವು ಮೂಡಿಸಬೇಕು ಎಂದು ಸಂಬಂಧಿಸಿದ ಇಲಾಖೆಗಳ ಮುಖ್ಯಸ್ಥರಿಗೆ ನಿರ್ದೇಶನ ನೀಡಿದರು. ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಮತ್ತು ಮೇವಿನ ಕೊರತೆ ಉಂಟಾದಲ್ಲಿ ದೂರು ಸಲ್ಲಿಸಲು ಸಾರ್ವಜನಿಕರಿಗೆ ಅನುಕೂಲವಾ ಗುವಂತೆ ಸಹಾಯವಾಣಿ ಆರಂಭಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಬ್ದುಲ್ ರೆಹಮಾನ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರ ಇಂದುಧರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಸೇರಿದಂತೆ ಲೋಕೋಪಯೋಗಿ, ಪಶು ಸಂಗೋಪನೆ, ಕೃಷಿ ಅಧಿಕಾರಿಗಳು ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಮಾಜಿಕ ಹೋರಾಟಗಾರ ಉಮೇಶ ಕೆ ಮುದ್ನಾಳ ನೇತೃತ್ವದಲ್ಲಿ ಕೈಯಲ್ಲಿ ಸಲಿಕೆ ಹಿಡಿದು ರೈತರಿಂದ ವಿನೂತನ ಪ್ರತಿಭಟನೆ



ಯಾದಗಿರಿ, ಫೆ.20-

ಸಾಲಶೂಲ ಮಾಡಿ ಭತ್ತ ಬೆಳೆದ ಬಡ ರೈತರು ಈಗ ಕಂಗಲಾಗಿದ್ದಾರೆ. ನೀರಿನ ಮೂಲಗಳು ಬತ್ತಿ ಹೋದ ಹಿನ್ನಲೆ ಭತ್ತದ ಬೆಳೆಗೆ ನೀರು ಹರಿಸಿಕೊಳ್ಳಲು ಸಾಧ್ಯವಾಗದೇ ಭತ್ತದ ಬೆಳೆಗಳು ಒಣಗುವ ಆತಂಕದಲ್ಲಿದ್ದಾರೆ. ಕೂಡಲೇ ಕಾಲುವೆಗೆ ನೀರು ಹರಿಸಿ ರೈತರ ಬೆನ್ನಿಗೆ ನೀಲಬೇಕು ಎಂದು ಅಖಿಲ ಭಾರತೀಯ ಕೋಲಿ ಸಮಾಜ ರಾಜ್ಯ ಸಂಘಟನಾ ಕಾರ್ಯದರ್ಶಿ ಹಾಗೂ ಸಾಮಾಜಿಕ ಹೋರಾಟಗಾರ ಉಮೇಶ್ ಮುದ್ನಾಳ ಅವರು ಕೈಯಲ್ಲಿ ಸಲಿಕೆ ಹಿಡಿದು ವಿನೂತನ ಪ್ರತಿಭಟನೆ ಮೂಲಕ ಸರ್ಕಾರಕ್ಕೆ ಒತ್ತಾಯ ಮಾಡಿದ್ದಾರೆ.

ಇಂದು ಉಮೇಶ್ ಮುದ್ನಾಳ ಅವರು ಯಾದಗಿರಿಯ ನಗರದ ಹೊರವಲಯದಲ್ಲಿರುವ ಬ್ರಿಜ್ ಕಂ ಬ್ಯಾರೇಜಿನ ಗೇಟ್‌ಗಳು ತುಕ್ಕು ಹಿಡಿದು ಎಲ್ಲಾ ನೀರು ಸೋರಿಕೆಯಾಗಿರುವ ಹಿನ್ನೆಲೆಯಲ್ಲಿ ಗಂಗಾನಗರದ ರೈತರ ಭತ್ತ ಒಣಗುವ ಆತಂಕದಲ್ಲಿರುವ ರೈತರ ಜಮೀನಿಗೆ ಭೇಟಿ ನೀಡಿ, ರೈತರ ಸಮಸ್ಯೆ ಆಲಿಸಿದರು. ಗಂಗಾನಗರದಲ್ಲಿರುವ ಹಳ್ಳವು ಸಂಪೂರ್ಣವಾಗಿ ಬತ್ತಿ ಹೋದ ಹಿನ್ನಲೆ ಹಳ್ಳದಿಂದ ರೈತರು ಜಮೀನಿಗೆ ನೀರು ಹರಿಸಿಕೊಳ್ಳಲು ಆಗುತ್ತಿಲ್ಲ. ಹೀಗಾಗಿ ಗಂಗಾನಗರದ ರೈತರ ಸುಮಾರು 500 ಎಕರೆ ಭತ್ತ ಮತ್ತು ತರಕಾರಿ ಬೆಳೆಯು ಒಣಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದರು.

ಕೈಯಲ್ಲಿ ಸಲಿಕೆ ಹಿಡಿದು ರೈತರ ಸಮ್ಮುಖದಲ್ಲಿ ವಿನೂತನ ಪ್ರತಿಭನಟೆ ಮಾಡಿ ಮಾತನಾಡಿದ ಉಮೇಶ್ ಮುದ್ನಾಳ ಅವರು, ಹಳ್ಳ ಬತ್ತಿ ಹೋದ ಹಿನ್ನಲೆ ಭತ್ತದ ಬೆಳೆಯು ಒಣಗಿ ರೈತರು ಆರ್ಥಿಕ ನಷ್ಟ ಅನುಭವಿಸುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಸರಕಾರ ತಕ್ಷಣ ಹತ್ತಿಕುಣಿ ಮತ್ತು ಸೌದಾಗರ ಜಲಾಶಯದಿಂದ ಹಳ್ಳಕ್ಕೆ ನೀರು ಹರಿಸಿ ರೈತರಿಗೆ ಜೀವ ಉಳಿಸಬೇಕಿದೆ. ಇಲ್ಲದಿದ್ದರೆ ರೈತರು ಕೃಷಿ ಬಿಟ್ಟು ಬೆಂಗಳೂರು, ಮುಂಬೈಗೆ ವಲಸೆ ಹೋಗುವಂತಾಗುತ್ತದೆ ಪರಿಸ್ಥಿತಿ ನಿರ್ಮಾಣವಾಗಲಿದೆ. ಕಾರಣ ಸರ್ಕಾರ ಎತ್ತೆಚ್ಚುಕೊಳ್ಳಬೇಕೆಂದು ಆಗ್ರಹಿಸಿದ್ದಾರೆ. ಇದೇ ಸಂದರ್ಭದಲ್ಲಿ ರೈತರಾದ ಚಂದ್ರಾವ್, ಪವನ್, ಆಂಜನೇಯ, ಬೆಳಗೇರಾ ಯಂಕಪ್ಪ ಭೀಮರಾಯ ಮರೆಪ್ಪ ಮಲ್ಲಪ್ಪ ಹಣಮಂತ ದುರ್ಗಪ್ಪ ರಾಜಪ್ಪ ಗೌಸ್ ಭಾಯ್ ವೈಲಾರಿ ಶಂಕರ್ ಮಲ್ಲೇಶಪ್ಪ ಶಾಕಪ್ಪ ಸಾಯಿಕುಮಾರ ಮಲ್ಲಪ್ಪ ನಾಗಪ್ಪ ಶಿವಣ್ಣ ಶರಣಪ್ಪ ಈಶಪ್ಪ ಸಾಬಣ್ಣ ಲಕ್ಷಣ ಆನಂದ್ ಸರಾಜಪ್ಪ ಶರತ್ ಮರಗಪ್ಪ ಅಂಜಪ್ಪ ಸಾಬಣ್ಣ ಜುಂಜಾಲಪ್ ಸೇರಿದಂತೆ ಅನೇಕ ರೈತರು ಪ್ರತಿಭಟನೆಯಲ್ಲಿ ಭಾಗವಹಿಸಿದರು.



## ಕಲಬುರಗಿಯಲ್ಲಿ ಆಸರೆ ಯೋಜನೆಗೆ ಸ್ಪಂದನೆ: ಒಂಟಿ ವಾಸಿಸುವ ಹಿರಿಯ ಮಹಿಳೆಯರ ಮನೆಬಾಗಿಲಿಗೆ ಪೊಲೀಸ್ ಭೇಟಿ

ಕಲಬುರಗಿ, ಫೆ.20-

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಮಹತ್ವಾಕಾಂಕ್ಷಿ ಆಸರೆ ಯೋಜನೆಯಡಿ ಕಲಬುರಗಿ ಜಿಲ್ಲೆಯಲ್ಲಿ ಇಂದು ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಒಂಟಿಯಾಗಿ ಜೀವನ ನಡೆಸುತ್ತಿರುವ ಮಹಿಳೆಯರು ಹಾಗೂ ವಯೋವೃದ್ಧ ಹಿರಿಯ ನಾಗರಿಕರಿಗೆ ಅಗತ್ಯ ಸಹಾಯ-ಸಹಕಾರ ಒದಗಿಸುವ ಉದ್ದೇಶದಿಂದ ಪೊಲೀಸರು ರಟಕಲ್ ಗ್ರಾಮದಲ್ಲಿ ಮನೆಮನೆಗೆ ಭೇಟಿ ನೀಡಿದರು.

ಈ ಸಂದರ್ಭದಲ್ಲಿ ಒಂಟಿಯಾಗಿ ವಾಸಿಸುತ್ತಿರುವ ವಯೋವೃದ್ಧ ಮಹಿಳೆಯರನ್ನು ಆತ್ಮೀಯವಾಗಿ ಸಂಪರ್ಕಿಸಿ, ಅವರ ಆರೋಗ್ಯ, ಭದ್ರತೆ ಮತ್ತು ದಿನನಿತ್ಯದ ಸಮಸ್ಯೆಗಳ ಕುರಿತು ಮಾಹಿತಿ ಸಂಗ್ರಹಿಸಲಾಯಿತು. ಮಹಿಳೆಯರ ಕುಂದುಕೊರತೆಗಳನ್ನು ಮನೋಜ್ಞವಾಗಿ ಆಲಿಸಿದ ಪೊಲೀಸರು, ಅಗತ್ಯವಿದ್ದಲ್ಲಿ ತಕ್ಷಣದ ನೆರವು ನೀಡುವುದಾಗಿ ಭರವಸೆ ನೀಡಿದರು.

ಆಸರೆ ಯೋಜನೆಯ ಉದ್ದೇಶ ಮತ್ತು ಅದರ ಸೌಲಭ್ಯಗಳ ಕುರಿತು ಜಾಗೃತಿ ಮೂಡಿಸುವುದರ ಜೊತೆಗೆ, ಯಾವುದೇ ತುರ್ತು ಪರಿಸ್ಥಿತಿಯಲ್ಲಿ ಪೊಲೀಸರನ್ನು ಸಂಪರ್ಕಿಸಲು ಅಗತ್ಯ ಮಾಹಿತಿಯನ್ನು ನೀಡಲಾಯಿತು. ಪೊಲೀಸ್ ಇಲಾಖೆ ಸದಾ ಹಿರಿಯ ನಾಗರಿಕರ ಬೆಂಬಲಕ್ಕೆ ನಿಂತಿದೆ ಎಂಬ ವಿಶ್ವಾಸವನ್ನು ಅಧಿಕಾರಿಗಳು ವ್ಯಕ್ತಪಡಿಸಿದರು.

ಗ್ರಾಮಸ್ಥರು ಈ ಮಾನವೀಯ ಕ್ರಮವನ್ನು ಮೆಚ್ಚಿ, ಹಿರಿಯರ ಸುರಕ್ಷತೆಗೆ ಪೊಲೀಸ್ ಇಲಾಖೆಯ ಈ ಪ್ರಯತ್ನ ಶ್ಲಾಘನೀಯವೆಂದು ಅಭಿಪ್ರಾಯಪಟ್ಟರು.

### ಆನೂರ.ಕೆ ಮತ್ತು ಹತ್ತಿಕುಣಿ ಗ್ರಾಮಗಳಲ್ಲಿ ರಸ್ತೆ ಕಾಮಗಾರಿಗಳಿಗೆ ಅಡಿಗಲ್ಲು
## ಕ್ಷೇತ್ರದ ಅಭಿವೃದ್ಧಿಯೇ ನನ್ನ ಮೂಲ ಮಂತ್ರ - ಶಾಸಕ ಕಂದಕೂರ

ಗುರುಮಠಕಲ್,ಫೆ.20-

ನನ್ನ ಮೇಲೆ ವಿಶ್ವಾಸವಿಟ್ಟು ಮತ ನೀಡಿದ ಗುರುಮಠಕಲ್ ಮತಕ್ಷೇತ್ರದ ಜನರ ಬೇಡಿಕೆಯಂತೆ ಪ್ರತಿ ಗ್ರಾಮ ಹಾಗೂ ತಾಂಡಾಗಳ ಅಭಿವೃದ್ಧಿಯೇ ನನ್ನ ಮೂಲ ಮಂತ್ರವಾಗಿದೆ ಎಂದು ಶಾಸಕ ಶರಣಗೌಡ ಕಂದಕೂರ ಅವರು ತಿಳಿಸಿದರು.

ತಾಲೂಕಿನ ಹತ್ತಿಕುಣಿ ಹಾಗೂ ಆನೂರ.ಕೆ ಗ್ರಾಮಗಳಲ್ಲಿ ಪ್ರತ್ಯೇಕವಾಗಿ ಹಮ್ಮಿಕೊಂಡಿದ್ದ ರಸ್ತೆ ನಿರ್ಮಾಣ ಕಾಮಗಾರಿಗಳಿಗೆ ಭೂಮಿ ಪೂಜೆ ಮಾಡಿ ಮಾತನಾಡಿದರು.

2025-26ನೇ ಸಾಲಿನ ಕೆಕೆಆರ್ ಡಿಬಿ ಮೈಕ್ರೋ ಸಾಮಾನ್ಯ ಯೋಜನೆ ಅಡಿಯಲ್ಲಿ ರೂ. 3.17ಕೋಟಿ ಮೊತ್ತದಲ್ಲಿ ಆನೂರ.ಕೆ ಗ್ರಾಮದಿಂದ ಆನೂರ. ಬಿ ಗ್ರಾಮದ ವರೆಗಿನ ರಸ್ತೆ ನಿರ್ಮಾಣ ಹಾಗೂ 9.9ಕೋಟಿ ವೆಚ್ಚದಲ್ಲಿ ಯಾದಗಿರಿ-ಸೇಡಂ ರಾಜ್ಯ ಹೆದ್ದಾರಿ ರಸ್ತೆಯ ಹತ್ತಿಕುಣಿ ಕ್ಯಾಂಪ್‌ದಿಂದ ಮೋಟ್ನಳ್ಳಿ ಕ್ರಾಸ್‌ವರೆಗಿನ ರಸ್ತೆ ನಿರ್ಮಾಣ ಕಾಮಗಾರಿಗಳಿಗೆ ಗುರುವಾರ ಚಾಲನೆ ನೀಡಿ ಮಾತನಾಡಿದರು.

ಪ್ರಸಕ್ತ ದಿನಗಳಲ್ಲಿ ಕ್ಷೇತ್ರದ ಅಭಿವೃದ್ಧಿಗೆ ಸರಕಾರದಿಂದ ಅನುದಾನ ತರುವುದು ಎಷ್ಟು ಕಷ್ಟ ಎಂಬುವುದು ಎಲ್ಲರಿಗೂ ತಿಳಿದಿರುವ ವಿಷಯ, ಕಾರಣ ಕ್ಷೇತ್ರದಲ್ಲಿ ಯಾವುದೇ



ಇಲಾಖೆ ಕಾಮಗಾರಿ ಕೈಗೊಂಡರು ಅದು ಬಹುದಿನಗಳ ಕಾಲ ಜನ ಸಾಮಾನ್ಯರಿಗೆ ಅನುಕೂಲತೆಯಾಗಬೇಕು, ಕಾರಣ ರಸ್ತೆ ಕಾಮಗಾರಿ ಕೈಗೊಳ್ಳುವ ಗುತ್ತಿಗೆದಾರರಿಂದ ಅಧಿಕಾರಿಗಳು ಗುಣಮಟ್ಟದ ಕೆಲಸ ತೆಗೆದುಕೊಳ್ಳಬೇಕೆಂದು ಎಂದು ಅಧಿಕಾರಿಗಳಿಗೆ ಸೂಚಿಸಿದರು. ವಿರೋಧ ಪಕ್ಷದಲ್ಲಿದ್ದರೂ ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಮಾಡಬೇಕು ಎಂಬ ಸದುದ್ದೇಶದಿಂದ ಸರಕಾರದ ಮಂತ್ರಿಗಳ ಮನೆ ಕಚೇರಿಗಳಿಗೆ ಸುತ್ತಿ ಅನುದಾನ ತರುತ್ತಿದ್ದೇನೆ. ಆ ದುಡ್ಡನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳುವ ಜವಾಬ್ದಾರಿ ಅಧಿಕಾರಿಗಳ ಮೇಲಿದೆ. ಹೀಗಾಗಿ ಕಾಮಗಾರಿ ಗುಣಮಟ್ಟದಿಂದ ಕೂಡಿರಬೇಕು ಮತ್ತು ನಿಗದಿತ ಸಮಯದಲ್ಲಿ ಪೂರ್ಣಗೋಳುವಂತೆ ನೋಡಿಕೊಳ್ಳಬೇಕು ಎಂದು ತಾಕೀತು ಮಾಡಿದರು.

ಸೇಡಂ ಹಾಗೂ ಸುತ್ತಮುತ್ತ ಸಿಮೆಂಟ್ ಕಾರ್ಖಾನೆಗಳು ಹೆಚ್ಚಿನ ಸಂಖ್ಯೆಯಲ್ಲಿವೆ, ಭಾರಿ ವಾಹನಗಳ ಓಡಾಟ ಕೂಡ ಈ ಭಾಗದಲ್ಲಿ ಹೆಚ್ಚಾಗಿದೆ, ಈ ದೃಷ್ಟಿಯಿಂದ ಎಲ್ಲರಿಗೂ ಅನುಕೂಲವಾಗಲು ರಸ್ತೆ ಅಭಿವೃದ್ಧಿ ಪಡಿಸಲಾಗುತ್ತಿದೆ ಎಂದು ತಿಳಿಸಿದರು.

ಹತ್ತಿಕುಣಿ ಹಾಗೂ ಸೌಧಾಗಾರ ಜಲಾಶಯಗಳ ಅಭಿವೃದ್ಧಿ ಪಡಿಸಲು ನಾನು ನಿರಂತರ ಪ್ರಯತ್ನದಲ್ಲಿದ್ದೇನೆ, ಈಗಾಗಲೇ ಹತ್ತಿಕುಣಿ ಜಲಾಶಯಕ್ಕೆ ಕೆಲ ದಿನಗಳ ಹಿಂದೆ ಕೇಂದ್ರ ಜಲ ಆಯೋಗದ ನಿರ್ದೇಶಕರು ಭೇಟಿ ನೀಡಿ, ಕಾಲುವೆಗಳ ಹಾಗೂ ಜಲಾಶಯ ಅಭಿವೃದ್ಧಿ ಕಾಮಗಾರಿ ಕೈಗೊಳ್ಳುವ ಕ್ರೀಯಾ ಯೋಜನೆ ತಯಾರಿಸಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ ಎಂದು ತಿಳಿಸಿದರು.

ಹತ್ತಿಕುಣಿ ಗ್ರಾಮ ದೊಡ್ಡ ಹೋಬಳಿಯಾಗಿದೆ, ಎಲ್ಲಾ ಜನರಿಗೆ ಉತ್ತಮ ವೈಧ್ಯಕೀಯ ಸೌಲಭ್ಯ ಸಿಗಲು ಈಗಾಗಲೇ ನೂತನ ಪ್ರಾಥಮಿಕ ಆರೋಗ್ಯ ಕೇಂದ್ರ ಹೊಸ ಕಟ್ಟಡ ನಿರ್ಮಾಣ ಮಾಡಲಾಗಿದೆ, ಆಸ್ಪತ್ರೆಯಲ್ಲಿ ಖಾಲಿ ಇರುವ ಸಿಬ್ಬಂಧಿಗಳ ನೇಮಕಕ್ಕೆ ಕ್ರಮ ಕೈಗೊಳ್ಳಲಾಗುವುದು, ಅಲ್ಲದೇ ಗ್ರಾಮದ ವಿವಿಧ ವಾರ್ಡಗಳಲ್ಲಿ ಅಂದಾಜು 3 ಕೋಟಿ ರೂ. ವೆಚ್ಚದಲ್ಲಿ ಸಿಮೆಂಟ್ ರಸ್ತೆಗಳು ಹಾಗೂ ಚರಂಡಿಗಳನ್ನು ನಿರ್ಮಾಣ ಮಾಡಲಾಗಿದೆ ಎಂದು ವಿವರಿಸಿದರು.

ನಾನು ಶಾಸಕನಾಗಿ ಆಯ್ಕೆಯಾದ ನಂತರ ಕಳೆದ 3 ವರ್ಷಗಳಲ್ಲಿ ಮತಕ್ಷೇತ್ರದ ಎಲ್ಲಾ ಗ್ರಾಮಗಳಲ್ಲಿ ಹಾಗೂ ತಾಂಡಾಗಳಲ್ಲಿ ಜನರ ಬೇಡಿಕೆಯಂತೆ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.

# ನಿಮ್ಮೂರು ಸುದ್ದಿ

## ಸಂಪಾದಕೀಯ

## ವಿದೇಶಗಳಲ್ಲಿ ದ್ವೇಷಕ್ಕೆ ಭಾರತೀಯರ ಬಲಿ- ಕೈಕಟ್ಟಿ ಕುಳಿತಿರುವವರೇ 'ವಿಶ್ವಗುರು'?




ಬಹಳ ಕಳವಳ ಮೂಡಿಸುವ ಸಂಗತಿಯೆಂದರೆ ಎಲ್ಲೆಡೆ ಜನಾಂಗೀಯ ದ್ವೇಷ ಹೆಚ್ಚುತ್ತಿದೆ. ಮೆಲ್ಬೋರ್ನ್‌ನ ಯುವಕರು ಹರ್ಮನ್‌ಪ್ರೀತ್ ಸಿಂಗ್‌ಗೆ ''ನೀನು ಭಾರತೀಯ, ಇಲ್ಲಿ ಯಾಕೆ ಬಂದೆ? ನಿನ್ನ ದೇಶಕ್ಕೆ ಹೋಗು'' ಎಂದು ಹೇಳುತ್ತಾ ಹಿಂಸೆ ನೀಡಿದ್ದಾರೆ ಎಂದರೆ, ಇದು ಕೇಂದ್ರ ಸರ್ಕಾರ ಹೆಚ್ಚು ತಲೆ ಕೆಡಿಸಿಕೊಳ್ಳಬೇಕಾದ ಸಂಗತಿ. ಅಷ್ಟೇ ಅಲ್ಲ ಭಾರತದೊಳಗೆ ಇಲ್ಲಿಯದೇ ಪ್ರಜೆಗಳನ್ನು ಧರ್ಮ, ಆಹಾರ, ಸಂಸ್ಕೃತಿ, ಆಚಾರ-ವಿಚಾರದ ಕಾರಣಕ್ಕೆ ಹಿಂಸೆ ನೀಡುವ ಸಂಘಟನೆಗಳ ಬಗ್ಗೆ ಕೂಡ ಕ್ರಮ ಕೈಗೊಳ್ಳಬೇಕಾದ ಸಂದರ್ಭವಿದು.

ಜಗತ್ತಿನೆಲ್ಲೆಡೆ ಜನಾಂಗೀಯ ದ್ವೇಷ, ಮೈಬಣ್ಣ-ಧರ್ಮ, ದೇಶದ ಕಾರಣಕ್ಕೆ ಜೀವ ತೆಗೆಯುವ ಪ್ರವೃತ್ತಿ ಯುವಕರಲ್ಲಿ ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆ. ಎಂತಹ ದೇಶವೇ ಆಗಲಿ, ಯಾವುದೇ ನಗರವಿರಲಿ ಮನುಷ್ಯ ಜೀವ ಬಹಳ ಅಗ್ಗವಾಗಿ ಹೋಗಿದೆ. ಅನ್ಯ ದೇಶೀಯರು, ಅನ್ಯ ಧರ್ಮೀಯರು, ಕಪ್ಪು ಮೈಬಣ್ಣದವರು, ಅನ್ಯ ಮುಖಚಹರೆಯವರು ಎಂಬೆಲ್ಲ ಭೇದಭಾವಗಳು ಮನುಷ್ಯತ್ವವನ್ನೇ ಮರೆಸಿ, ಕ್ಷಣ ಮಾತ್ರದಲ್ಲಿ ಜೀವ ತೆಗೆಯಲು ಪ್ರಚೋದಿಸುತ್ತಿವೆ ಎಂಬುದು ಅರಗಿಸಿಕೊಳ್ಳಲಾಗದ ದುರಂತ ಸತ್ಯ.

ಆಸ್ಟ್ರೇಲಿಯಾದ ಮೆಲ್ಬೋರ್ನ್ ಬಳಿಯ ಗೀಲಾಂಗ್‌ನಲ್ಲಿರುವ ಜಿಮ್‌ನಲ್ಲಿ ನರ್ಸ್ ಆಗಿ ಕೆಲಸ ಮಾಡುತ್ತಿದ್ದ ಪಂಜಾಬ್ ನ ಹರ್ಮನ್‌ಪ್ರೀತ್ ಸಿಂಗ್ (22) ಮೇಲೆ ಮೂವರು ಹಲ್ಲೆ ನಡೆಸಿದ್ದಾರೆ ಎಂದು ನಿನ್ನೆ (ಗುರುವಾರ) ವರದಿಯಾಗಿದೆ. ಭಾರತೀಯ ನಾಯಿ ವಾಪಸ್ ಹೋಗು. ನೀನು ಎಲ್ಲಿಂದ ಬಂದಿದ್ದೀಯೋ ಅಲ್ಲಿಗೇ ಹೋಗು ಎಂದು ಬೆದರಿಕೆ ಹಾಕಿದ್ದಾಗಿ ಹಲ್ಲೆಗೊಳಗಾದ ಯುವಕ ಮಾಧ್ಯಮಗಳಿಗೆ ಹೇಳಿಕೆ ನೀಡಿದ್ದಾರೆ.

ನೀನು ಭಾರತೀಯ, ನೀನು ಹಿಂದೂ, ನೀನು ವಿದೇಶಿ ಎಂಬ ಕಾರಣಕ್ಕೆ ಹಲ್ಲೆ ಮಾಡುವುದು, ಹತ್ಯೆ ಮಾಡುತ್ತಿರುವುದು ಆತಂಕಕಾರಿ ಬೆಳವಣಿಗೆ. ಮೂಲಭೂತವಾದಕ್ಕೆ ಯಾವ ದೇಶವಾದರೂ ಅಷ್ಟೇ. ಮನುಷ್ಯರನ್ನು ಮನುಷ್ಯರನ್ನಾಗಿ ನೋಡದೇ, ಆತನ ಧರ್ಮ, ಮೈಬಣ್ಣ ನೋಡಿ ಕೊಲೆ ಮಾಡುವ ಮಟ್ಟಿಗೆ ಯುವ ಸಮೂಹವನ್ನು ಅವಿವೇಕ ಆವರಿಸಿ ವಿವೇಚನಾಶೂನ್ಯರನ್ನಾಗಿಸುತ್ತಿರುವುದು ಕ್ರೂರ ವಾಸ್ತವ. ಇದನ್ನು ರಾಜತಾಂತ್ರಿಕ ಮಟ್ಟದಲ್ಲಿ ಗಂಭೀರವಾಗಿ ಪರಿಗಣಿಸುವ ಅಗತ್ಯವಿದೆ.

ಕೆನಡಾದ ಟೊರಾಂಟೊದಲ್ಲಿ ಫೆಬ್ರವರಿ 7,2026 ರಂದು ನೆಲಮಂಗಲದ ಟೆಕಿ ಚಂದನ್ ಕುಮಾರ್ (30) ಅವರನ್ನು ದುಷ್ಕರ್ಮಿಗಳು ಗುಂಡಿಕ್ಕಿ ಹತ್ಯೆ ಮಾಡಿದ್ದಾರೆ. ಕೆನಡಾದಲ್ಲಿಯೇ ವಾಸವಿದ್ದ ಚಂದನ್ ಮೇಲೆ ಪಾರ್ಕಿಂಗ್ ಲಾಟ್‌ನಲ್ಲಿ ನಡೆದ ಶೂಟೌಟ್, ಇದೊಂದು ಟಾರ್ಗೆಟೆಡ್ () ದಾಳಿ ಎಂದು ಪೊಲೀಸರು ಶಂಕಿಸಿದ್ದಾರೆ. ಕಾರಣ ಇನ್ನೂ ಗೊತ್ತಾಗಿಲ್ಲ. ಟಾರ್ಗೆಟೆಡ್ ಅಂದ್ರೆ ವೈಯಕ್ತಿಕ ದ್ವೇಷವೇ ಅಥವಾ ಜನಾಂಗೀಯ ದ್ವೇಷವೇ ಗೊತ್ತಿಲ್ಲ.

ಕ್ಯಾಲಿಫೋರ್ನಿಯಾ ವಿಶ್ವವಿದ್ಯಾಲಯ, ಬರ್ಕ್ಲಿಯಲ್ಲಿ ರಾಸಾಯನಿಕ ಮತ್ತು ಬಯೋಮಾಲಿಕ್ಯುಲರ್ ಎಂಜಿನಿಯರಿಂಗ್ ಅಧ್ಯಯನ ಮಾಡುತ್ತಿದ್ದ ಕರ್ನಾಟಕದ ಸಾಕೇತ್ ಶ್ರೀನಿವಾಸಯ್ಯ ಫೆಬ್ರವರಿ 9 ರಂದು ಕಾಣೆಯಾಗಿದ್ದರು. ಆರು ದಿನಗಳ ನಂತರ ಆತನ ಶವ ಪತ್ತೆಯಾಗಿದೆ. ಸಾಕೇತ್ ಸಾವಿನ ಬಗ್ಗೆ ಪೋಷಕರು ಅನುಮಾನ ವ್ಯಕ್ತಪಡಿಸಿದ್ದಾರೆ.

2025ರಲ್ಲಿ ಕನಿಷ್ಠ 9 ಭಾರತೀಯರು (ವಿದ್ಯಾರ್ಥಿಗಳು ಸೇರಿದಂತೆ) ಗುಂಡಿನ ದಾಳಿ, ಚಾಕು ಇರಿತ ಮತ್ತು ಇತರ ಹಿಂಸೆಯಿಂದ ಸತ್ತಿದ್ದಾರೆ ಎಂಬ ವರದಿಗಳಿವೆ. ಭಾರತದಲ್ಲಿ ಶಿಕ್ಷಣ ಪಡೆದು ಉದ್ಯೋಗಕ್ಕೆಂದು ವಿದೇಶಗಳಿಗೆ ತೆರಳುವವರು ಮತ್ತು ಶಿಕ್ಷಣಕ್ಕೆಂದೇ ವಿದೇಶಿ ವಿಶ್ವವಿದ್ಯಾಲಯಗಳಿಗೆ ತೆರಳುವ ಯುವ ಸಮೂಹ ಇಂದು ಆತಂಕದಲ್ಲಿ ದಿನ ಕಳೆಯುವಂತಾಗಿದೆ. ಭಾರತದಲ್ಲಿರುವ ಹೆತ್ತವರು ರಾತ್ರಿ ನಿದ್ರೆಗೆಡುವ ಸಂದರ್ಭ ಬಂದಿದೆ. ವಿದೇಶದಿಂದ ಬರುವ ಫೋನ್ ಕರೆಯನ್ನು ಆತಂಕದಿಂದ ನಡುಗುವ ಕೈಗಳಿಂದ ಸ್ವೀಕರಿಸುವ ಸರದಿ ಹೆತ್ತವರದ್ದು. ಗಡಿಯಲ್ಲಿ ದೇಶ ಕಾಯುವ ಸೈನಿಕರ ಕುಟುಂಬಗಳ ಆತಂಕದಂತೆ ವಿದೇಶಕ್ಕೆ ತೆರಳಿದವರ ಕುಟುಂಬಗಳ ಪರಿಸ್ಥಿತಿಯೂ ಆಗಿದೆ.

ಬಹಳ ಕಳವಳ ಮೂಡಿಸುವ ಸಂಗತಿಯೆಂದರೆ ಎಲ್ಲೆಡೆ ಜನಾಂಗೀಯ ದ್ವೇಷ ಹೆಚ್ಚುತ್ತಿದೆ. ಮೆಲ್ಬೋರ್ನ್‌ನ ಯುವಕರು ಹರ್ಮನ್‌ಪ್ರೀತ್ ಸಿಂಗ್‌ಗೆ ''ನೀನು ಭಾರತೀಯ ಇಲ್ಯಾಕೆ ಬಂದೆ'' ಎಂದು ಪ್ರಶ್ನಿಸಿ ಹಿಂಸೆ ನೀಡಿದ್ದಾರೆ ಎಂದರೆ, ಇದು ಕೇಂದ್ರ ಸರ್ಕಾರ ಹೆಚ್ಚು ತಲೆ ಕೆಡಿಸಿಕೊಳ್ಳಬೇಕಾದ ಸಂಗತಿ. ಅಷ್ಟೇ ಅಲ್ಲ ಭಾರತದೊಳಗೆ ಇಲ್ಲಿಯದೇ ಪ್ರಜೆಗಳನ್ನು ಧರ್ಮ, ಆಹಾರ, ಸಂಸ್ಕೃತಿ, ಆಚಾರ-ವಿಚಾರದ ಕಾರಣಕ್ಕೆ ಹಿಂಸೆ ನೀಡುವ ಸಂಘಟನೆಗಳ ಬಗ್ಗೆ ಕೂಡ ಕ್ರಮ ಕೈಗೊಳ್ಳಬೇಕಾದ ಸಂದರ್ಭವಿದು. ಭಾರತದಲ್ಲಿ ಅನ್ಯತೆಯ ನೆಪದಲ್ಲಿ ನಡೆಯುತ್ತಿರುವ ಆಕ್ರಮಣಗಳಿಗೆ ಪ್ರಚೋದನೆ ನೀಡುತ್ತಿರುವ ಸಂಖ್ಯೆಯೂ ಭಾರೀ ದೊಡ್ಡದು. ಅಂತಹ ವಾತಾವರಣವನ್ನು ಆಳುವ ವ್ಯವಸ್ಥೆಯೇ ಪೋಷಿಸಿದೆ.

ಇತ್ತೀಚೆಗೆ ಬಾಂಗ್ಲಾದೇಶದಲ್ಲಿ ಬಹುಸಂಖ್ಯಾತ ಮುಸ್ಲೀಮರು ಅಲ್ಪಸಂಖ್ಯಾತ ಹಿಂದೂಗಳನ್ನು ಚಿತ್ರ ಹಿಂಸೆ ಕೊಟ್ಟು ಕೊಂದಿರುವ ಬಗ್ಗೆ ಸಂಘಪರಿವಾರ ಭಾರೀ ಆಕ್ರೋಶ ವ್ಯಕ್ತಪಡಿಸಿತ್ತು. ಅದೇ ರೀತಿ ಭಾರತದಲ್ಲಿ ಮುಖ ಚಹರೆ, ಭಾಷೆ ನೋಡಿ ಬಾಂಗ್ಲಾ ದೇಶಿಯಾ ಎಂದು ಕೇಳಿ ಕೊಂದು ಹಾಕುವ ಬೆಳವಣಿಗೆಗಳು ನಡೆದಿದ್ದವು. ಭಾರತದಲ್ಲಿಯೇ ಹುಟ್ಟಿ ಬದುಕುತ್ತಿರುವ ಅಪ್ಪಟ ಭಾರತೀಯ ಮುಸ್ಲಿಮರನ್ನು ಅವರ ಆಹಾರ, ಉಡುಗೆ, ಧಾರ್ಮಿಕ ಆಚರಣೆಯ ಕಾರಣಕ್ಕೆ ಹಿಂಸಿಸಲಾಗುತ್ತಿದೆ. ಆದರೆ, ಭಾರತ ಶಿಕ್ಷಿತ ಯುವಕರು ಮುಸ್ಲಿಂ ಮತ್ತು ಕ್ರೈಸ್ತರ ದೇಶದಲ್ಲಿ ಕೈ ತುಂಬ ಸಂಬಳದ ಆಸೆಗಾಗಿ ನೆಲೆಸಿದ್ದಾರೆ. ಇಲ್ಲಿ ಮಸೀದಿಗಳನ್ನು ಕಡವಲು ಯತ್ನಿಸುವ, ಮಸೀದಿಯ ತಳದಲ್ಲಿ ಮಂದಿರ ಹುಡುಕುವ ಮಂದಿ ಅದೇ ಮುಸ್ಲಿಮರ, ಕ್ರೈಸ್ತರ ನಾಡಿನಲ್ಲಿ ದೇವಮಂದಿರಗಳನ್ನು ಕಟ್ಟಿಕೊಂಡು ಹಬ್ಬಗಳನ್ನು ಆಚರಿಸಿಕೊಂಡು ಸ್ವತಂತ್ರವಾಗಿ ಬದುಕಲು ಬಯಸುತ್ತಿದ್ದಾರೆ. ಧರ್ಮಗಳನ್ನು ರಾಜಕೀಯ ಗುರಾಣಿ ಮಾಡಿಕೊಂಡ ನಾಯಕರು ಮಾಡುವ ತಪ್ಪಿಗೆ ಅಮಾಯಕರು ಪ್ರಾಣ ಕಳೆದುಕೊಳ್ಳುತ್ತಿದ್ದಾರೆ.

ಕೆಲ ವರ್ಷಗಳ ಹಿಂದೆ ಆಸ್ಟ್ರೇಲಿಯಾದಲ್ಲಿ ರಸ್ತೆಬದಿ ನಡೆದುಕೊಂಡು ಹೋಗುತ್ತಿದ್ದ ಭಾರತೀಯ ಮಹಿಳೆಯನ್ನು ಅಪರಿಚಿತರು ಗುಂಡಿಟ್ಟು ಸಾಯಿಸಿದ್ದರು. ಅವರಿಗೆ ದರೋಡೆ ಮಾಡುವ ಉದ್ದೇಶ ಇರಲಿಲ್ಲ. ಜನಾಂಗೀಯ ದ್ವೇಷ ಈ ಕೃತ್ಯ ಮಾಡಿಸಿತ್ತು. ಮೊನ್ನೆಯಷ್ಟೇ ಕೆನಡಾದಲ್ಲಿ ಟೆಕ್ಕಿ ಚಂದನ್ ದೇಹವನ್ನು ಆರು ಗುಂಡುಗಳು ಪ್ರವೇಶಿಸಿದ್ದವು. ಕಾರಣ ಇನ್ನೂ ನಿಗೂಢ. ಆದರೆ ಆತ ಅಲ್ಲಿ ಕನ್ನಡ ಸಂಘ ಕಟ್ಟಿ, ಕಾರ್ಯಕ್ರಮಗಳನ್ನು ಆಯೋಜಿಸುತ್ತ ಸಕ್ರಿಯನಾಗಿದ್ದ ಎಂದು ಆತನ ಸ್ನೇಹಿತರು ತಿಳಿಸಿದ್ದಾರೆ. ಇವೆಲ್ಲ ಸ್ಥಳೀಯರ ವಿರೋಧಕ್ಕೆ ಕಾರಣವಾಗಿರಲೂ ಬಹುದು ಎಂಬ ಅನುಮಾನವಿದೆ.

ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಅಧಿಕೃತ ಅಂಕಿಅಂಶಗಳ ಪ್ರಕಾರ 2021ರಲ್ಲಿ 29, 2022ರಲ್ಲಿ 57, 2023ರಲ್ಲಿ 86 ಭಾರತೀಯರು ಹೀಗೆ 3 ವರ್ಷಗಳಲ್ಲಿ ಒಟ್ಟು 172 ಮಂದಿ ವಿದೇಶದಲ್ಲಿ ದಾಳಿಗೆ ಒಳಗಾಗಿ ಮೃತಪಟ್ಟಿದ್ದಾರೆ. ಈ ಪೈಕಿ ಹೆಚ್ಚಿನವು ಸೌದಿ ಅರೇಬಿಯಾ, ಅಮೆರಿಕಾ, ಫಿಲಿಪ್ಪೀನ್ಸ್, ಯುಎಇ, ಕೆನಡಾ, ಯುಕೆ ಮತ್ತು ಇತರ ದೇಶಗಳಲ್ಲಿ ನಡೆದ ಹತ್ಯೆಗಳು.

ವಿದೇಶಗಳಲ್ಲಿ ವಿದ್ಯಾರ್ಥಿಗಳ ಸುರಕ್ಷತೆ ಕುರಿತು ಲೋಕಸಭೆಯಲ್ಲಿ ಸಂಸದ ಅಸದುದ್ದೀನ್ ಓವೈಸಿ ಕೇಳಿದ ಪ್ರಶ್ನೆಗೆ ಉತ್ತರವಾಗಿ, ವಿದೇಶಾಂಗ ವ್ಯವಹಾರಗಳ ಸಚಿವಾಲಯವು ಭಾರತೀಯ ವಿದ್ಯಾರ್ಥಿಗಳ ಸುರಕ್ಷತೆಗಾಗಿ ಕೈಗೊಂಡಿರುವ ಕ್ರಮಗಳನ್ನು ವಿವರಿಸಿದೆ.

ವಿದೇಶದಲ್ಲಿರುವ ಭಾರತೀಯ ರಾಯಭಾರಿ ಕಚೇರಿಗಳು ಮತ್ತು ದೂತಾವಾಸಗಳು ತಮ್ಮ ವ್ಯಾಪ್ತಿಯಲ್ಲಿರುವ ವಿಶ್ವವಿದ್ಯಾಲಯಗಳಲ್ಲಿ ಅಧ್ಯಯನ ಮಾಡುವ ಭಾರತೀಯ ವಿದ್ಯಾರ್ಥಿಗಳೊಂದಿಗೆ ನಿಯಮಿತ ಸಂಪರ್ಕದಲ್ಲಿರುತ್ತವೆ. ವಿದೇಶಗಳಿಗೆ ಆಗಮಿಸಿದ ಬಳಿಕ ಅವರಿಗೆ ಕಾರ್ಯಕ್ರಮಗಳನ್ನು ನಡೆಸಿ, ಎದುರಾಗಬಹುದಾದ ಸವಾಲುಗಳು, ಅಪಾಯಗಳು ಮತ್ತು ವಿದೇಶದಲ್ಲಿ ಅಧ್ಯಯನ ಮಾಡುವ ವೇಳೆ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆಗಳ ಬಗ್ಗೆ, ಅವಶ್ಯಕತೆ ಇದ್ದಾಗ ಸಲಹೆಗಳನ್ನು ನೀಡಲಾಗುತ್ತದೆ ಎಂದು ತಿಳಿಸಿದೆ. ಇದು ಒಂದು ದೇಶದ ಸರ್ಕಾರವಾಗಿ ಮಾಡಬಹುದಾದ ಮೂಲಭೂತ ಕರ್ತವ್ಯ. ಅದರಾಚೆಗೆ ವಿದೇಶದಲ್ಲಿ ಶಿಕ್ಷಣ- ವೃತ್ತಿಯ ಸಲುವಾಗಿ ತೆರಳಿದವರ ಜೀವಕ್ಕೆ ಭದ್ರತೆಯ ಭರವಸೆ ನೀಡುವುದು, ಭಾರತೀಯರನ್ನು ಬಚಾವ್ ಮಾಡುವುದು ಸವಾಲಿನ ಕೆಲಸ. ಆ ನಿಟ್ಟಿನಲ್ಲಿ ಒಕ್ಕೂಟ ಸರ್ಕಾರ ಕಾರ್ಯಪ್ರವೃತ್ತವಾಗಬೇಕಿದೆ.

ವಿಶ್ವಗುರು ಎಂದು ತಮಗೆ ತಾವೇ ಹೇಳಿಕೊಂಡರೇನು ಪ್ರಯೋಜನ? ವಿದೇಶದಲ್ಲಿನ ತನ್ನ ಪ್ರಜೆಗಳ ಪ್ರಾಣಗಳನ್ನು ಕೂಡ ಕಾಪಾಡದೇ ಹೋದರೆ ತಮ್ಮ ಬೆನ್ನನ್ನು ತಾವೇ ತಟ್ಟಿಕೊಳ್ಳುವ ಪೊಳ್ಳು ಆತ್ಮರತಿಯ ಅರ್ಹತೆ ಕೂಡ ಉಳಿಯುವುದಿಲ್ಲ.

# ಘಾಟು ಎಬ್ಬಿಸಿದ ಕೆಂಪು ಬೆಡಗಿ: ಇತಿಹಾಸದಲ್ಲೇ ಮೊದಲ ಬಾರಿಗೆ ಉತ್ತಮ ಬೆಲೆ ಕಂಡ ಬ್ಯಾಡಗಿ ಮೆಣಸಿನಕಾಯಿ

ಬ್ಯಾಡಗಿ ಮೆಣಸಿನಕಾಯಿ ಕೇವಲ ಒಂದು ಪದಾರ್ಥವಲ್ಲ, ಕರ್ನಾಟಕದ ರೈತರ ಶ್ರಮ, ಸಂಸ್ಕೃತಿ ಮತ್ತು ಆರ್ಥಿಕ ಸಬಲೀಕರಣದ ಸಂಕೇತ. ಟ್ಯಾಗ್‌ನೊಂದಿಗೆ ಇದರ ಗುಣಮಟ್ಟ ರಕ್ಷಣೆಗೊಂಡಿದ್ದು, ಭವಿಷ್ಯದಲ್ಲಿ ಮತ್ತಷ್ಟು ಮೌಲ್ಯವರ್ಧನೆಯ ಅವಕಾಶಗಳು ತೆರೆದುಕೊಂಡಿವೆ.

ಗದಗದ ಮೆಣಸಿನಕಾಯಿ ರೈತರು ಬ್ಯಾಡಗಿ ಬ್ರಾಂಡ್‌ನ ಮೆಣಸಿನಕಾಯಿ ಕ್ವಿಂಟಲ್‌ಗೆ 1 ಲಕ್ಷ ರೂಪಾಯಿ ದಾಟುವ ನಿರೀಕ್ಷೆಯಲ್ಲಿದ್ದಾರೆ. ಜಿಲ್ಲೆಯ ರೈತರೊಬ್ಬರು ಕ್ವಿಂಟಲ್‌ಗೆ 89,999 ರೂಪಾಯಿಗಳನ್ನು ಪಡೆಯುವ ಮೂಲಕ ದಾಖಲೆಯನ್ನು ಬರೆದಿದ್ದಾರೆ. ಸಗಟು ಬೆಲೆಗಳು ಹೆಚ್ಚುತ್ತಿದ್ದು, ರೈತರ ಮೊಗದಲ್ಲಿ ಮಂದಹಾಸ ಮೂಡುತ್ತಿದೆ.

ಗದಗ, ಧಾರವಾಡ, ಹಾವೇರಿ ಜಿಲ್ಲೆಗಳಲ್ಲೂ ಬ್ಯಾಡಗಿ ಮೆಣಸಿನಕಾಯಿ ಬೆಳೆಯಲಾಗಿದೆ. ಫೆ.6ರಂದು ಕ್ವಿಂಟಲ್‌ಗೆ 74,099 ರೂ. ಪಡೆದ ಲಕ್ಕುಂಡಿ ರೈತನ ದಾಖಲೆಯನ್ನು ಮುರಿದು ರೋಣದ ರೈತ ವಿಜಯಕುಮಾರ ಸಜ್ಜನರ ಐತಿಹಾಸಿಕ ಬೆಲೆ ದಾಖಲಿಸಿದ್ದಾರೆ.

ಮುಂಬೈ, ಹೈದರಾಬಾದ್ ಸೇರಿದಂತೆ ದೇಶದ ವಿವಿಧ ಭಾಗಗಳಿಂದ ವ್ಯಾಪಾರಿಗಳು ಬಂದು ಬ್ಯಾಡಗಿ ಮೆಣಸಿನಕಾಯಿಯನ್ನು ಹೆಚ್ಚಿನ ಪ್ರಮಾಣದಲ್ಲಿ ಖರೀದಿಸುತ್ತಿದ್ದು, ಮೆಣಸಿನಕಾಯಿ ಪುಡಿ ತಯಾರಿಕಾ ಕಂಪನಿಗಳಿಗೆ ಪೂರೈಕೆ ಮಾಡಲಾಗುತ್ತಿದೆ. ಸಾಮಾನ್ಯವಾಗಿ ಈ ಮೆಣಸಿನಕಾಯಿ ದರ ಪ್ರತಿ ಕ್ವಿಂಟಲ್‌ಗೆ ರೂ. 35,000ರಿಂದ 50,000 ನಡುವೆ ಇರುತ್ತದೆ. ಆದರೆ ಗುಣಮಟ್ಟ ಮತ್ತು ಬೇಡಿಕೆ ಹೆಚ್ಚಳದಿಂದ ಈ ಬಾರಿ ಇತಿಹಾಸದಲ್ಲೇ ಅತ್ಯಧಿಕ ದರ ದಾಖಲಾಗಿದೆ. ಐತಿಹಾಸಿಕ ಬೆಲೆ ಏರಿಕೆಯಿಂದ ರೈತರು ಹರ್ಷಗೊಂಡಿದ್ದಾರೆ ಮತ್ತು ಇದು ಶೀಘ್ರದಲ್ಲೇ ಒಂದು ಲಕ್ಷ ಗಡಿ ದಾಟಲಿದೆ ಎಂದು ವಿಶ್ವಾಸದಲ್ಲಿದ್ದಾರೆ. ಹಲವರು ಸಿಹಿತಿಂಡಿಗಳನ್ನು ವಿತರಿಸಿ ಸಂಭ್ರಮ ಆಚರಿಸುತ್ತಿದ್ದಾರೆ.

2023ರ ಜನವರಿಯಲ್ಲಿ, ಕೊಟುಮಚಗಿಯ ರೈತ ಶರಣಪ್ಪ 70,499 ರೂ.ಗಳನ್ನು ಪಡೆದಿದ್ದರು. 2026ರ ಫೆಬ್ರವರಿಯಲ್ಲಿ ಮೊದಲ ವಾರದಲ್ಲಿ ಲಕ್ಕುಂಡಿಯ ರೈತ ಚಂದ್ರು ಎಂಬವವರು ಕ್ವಿಂಟಲ್‌ಗೆ 74,099 ರೂ.ಗಳನ್ನು ಪಡೆದರು. ಇದೀಗ ವಿಜಯಕುಮಾರ್ ತಮ್ಮ ಬೆಳೆಗೆ ಸಾರ್ವಕಾಲಿಕ ಗರಿಷ್ಠ ಬೆಲೆ 89,999 ರೂ.ಗಳನ್ನು ಪಡೆದಿದ್ದಾರೆ.

ಗದಗ ಜಿಲ್ಲೆಯ ರೈತ ವಿಜಯಕುಮಾರ್ ಈ ದಿನ.ಕಾಮ್‌ನೊಂದಿಗೆ ಮಾತನಾಡಿ, ''ನನ್ನ ಬೆಳೆಗೆ ಐತಿಹಾಸಿಕ ಬೆಲೆ ಸಿಕ್ಕಿದ್ದರಿಂದ ನನಗೆ ತುಂಬಾ ಸಂತೋಷವಾಗಿದೆ. ನಾನು ಇದನ್ನು ನಿರೀಕ್ಷಿಸಿರಲಿಲ್ಲ. ಆದರೆ ಸಂಪೂರ್ಣವಾಗಿ ಸಾವಯವ ಕೃಷಿ ಮೂಲಕ ಮೆಣಸಿನಕಾಯಿ ಬೆಳೆದಿರುವುದರಿಂದ ನನಗೆ ನ್ಯಾಯಯುತ ಬೆಲೆ ಸಿಗುತ್ತದೆ ಅಂದುಕೊಂಡಿದ್ದೆ. ಆದರೆ ನನ್ನ ನಿರೀಕ್ಷೆಗೆ ಮೀರಿದ ಬೆಲೆ ಸಿಕ್ಕಿದೆ. ಇದರಿಂದ ನನಗೆ ತೃಪ್ತಿಯಾಗಿದೆ. ಎಲ್ಲ ರೈತರು ಇದನ್ನು ಸಂಭ್ರಮಾಚರಿಸಿದರು. ಉತ್ತಮ ಗುಣಮಟ್ಟದ ಬೆಳೆಗೆ ಶೀಘ್ರದಲ್ಲೇ ಒಂದು ಲಕ್ಷ ರೂಪಾಯಿಗೂ ದಾಟಬಹುದು'' ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ರೈತ ಮುಖಂಡ ಮಲ್ಲಿಕಾರ್ಜುನ್ ಅವರು ಈ ದಿ.ಕಾಮ್‌ನೊಂದಿಗೆ ಮಾತನಾಡಿ, ''ಹಾವೇರಿ ಜಿಲ್ಲೆಯ ಬ್ಯಾಡಗಿಯಲ್ಲಿರುವ ಅಂತಾರಾಷ್ಟ್ರೀಯ ಮಾರುಕಟ್ಟೆಗೆ ಹಲವು ಪ್ರದೇಶಗಳಿಂದ ಮೆಣಸಿನಕಾಯಿ ಬರುತ್ತದೆ. ಬ್ಯಾಡಗಿ ಮೆಣಸಿನಕಾಯಿಯನ್ನು ಸಾಮಾನ್ಯವಾಗಿ ಗದಗ, ಧಾರವಾಡ, ಹಾವೇರಿ, ರಾಯಚೂರು, ಬಳ್ಳಾರಿ ಜಿಲ್ಲೆಗಳಲ್ಲಿ ವ್ಯಾಪಕವಾಗಿ ಬೆಳೆಯಲಾಗುತ್ತದೆ. ಆದರೆ ಈ ವರ್ಷ ಇಲ್ಲೂ ಕೂಡ ಉತ್ಪಾದನೆ ಕಡಿಮೆಯಾಗಿದೆ. ನೆರೆ ರಾಜ್ಯಗಳಾದ ಆಂಧ್ರಪ್ರದೇಶ, ತಮಿಳುನಾಡು, ಮಹಾರಾಷ್ಟ್ರಗಳಿಂದಲೂ ಬ್ಯಾಡಗಿ ಮಾರುಕಟ್ಟೆಗೆ ಲಕ್ಷಾಂತರ ಮೆಣಸಿನಕಾಯಿ ಚೀಲಗಳು ಆವಕವಾಗುತ್ತವೆ'' ಎಂದು ಹೇಳಿದರು.

''ಬ್ಯಾಡಗಿಯಲ್ಲಿ ಈ ಬಾರಿ ಒಂದೇ ಒಂದು ಎಕರೆಯಲ್ಲೂ ಮೆಣಸಿನಕಾಯಿ ಬೆಳೆದಿಲ್ಲ. ರೋಗ ತಗುಲಿ ನಷ್ಟ ಅನುಭವಿಸುವ ಸಲುವಾಗಿ ಏಳೆಂಟು ವರ್ಷಗಳಿಂದ ಮೆಣಸಿನಕಾಯಿ ಬೆಳೆಯನ್ನು ಕೈಬಿಡಲಾಗಿದೆ. ಆದರೆ ಬ್ಯಾಡಗಿ ಮಾರುಕಟ್ಟೆ ವ್ಯವಸ್ಥೆ ಶಿಸ್ತುಬದ್ಧವಾಗಿದ್ದು, ಇ-ಟೆಂಡರ್ ಮೂಲಕ ವ್ಯಾಪಾರ ವಹಿವಾಟು ನಡೆಯುತ್ತದೆ. ಅಲ್ಲದೆ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲೂ ಬ್ಯಾಡಗಿ ಮೆಣಸಿನಕಾಯಿಗೆ ಬೇಡಿಕೆ ಇರುವುದರಿಂದ ವ್ಯಾಪಾರಸ್ಥರು ಬೇರೆ ಮಾರುಕಟ್ಟೆಯಿಂದ ತಂದು ಮಾರಾಟ ಮಾಡುವ ಬದಲಿಗೆ ಒಂಚೂರು ರೇಟ್ ಜಾಸ್ತಿಯಾದರೂ ಪರವಾಗಿಲ್ಲ, ಬ್ಯಾಡಗಿ ಮಾರುಕಟ್ಟೆಯಲ್ಲೇ ಖರೀದಿಸಿ ರಫ್ತು ಮಾಡಬಹುದು ಅಂದುಕೊಳ್ಳುತ್ತಾರೆ. ಹಾಗಾಗಿ ಕಾಂಪಿಟೇಷನ್ ಜಾಸ್ತಿಯಾಗಿ ರೈತರಿಗೆ ಉತ್ತಮ ಬೆಲೆ ಸಿಗುತ್ತಿದೆ. ಸ್ಥಳೀಯವಾಗಿ ಬೆಳೆ ಕಡಿಮೆಯಾದರೂ, ಮಾರುಕಟ್ಟೆಯನ್ನು ಕಳೆದುಕೊಂಡಿಲ್ಲ. ಹೊರಗಿನಿಂದ ಮಾರುಕಟ್ಟೆಗೆ ತರುವ ರೈತರಿಗೆ ಲಾಭವಿದೆ. ಯಾವುದೇ ಮಧ್ಯವರ್ತಿಗಳ ಹಾವಳಿ ಇಲ್ಲ. ನೇರವಾಗಿ ರೈತರ ಖಾತೆಗೆ ಹಣ ಜಮೆಯಾಗುವುದರಿಂದ ರೈತರಿಗೆ ಅನುಕೂಲವಾಗಿದೆ'' ಎಂದು ಹೇಳಿದರು.




ಬ್ಯಾಡಗಿ ಮೆಣಸು

''ಈ ವರ್ಷ ಬ್ಯಾಡಗಿ ಅಂತಾರಾಷ್ಟ್ರೀಯ ಮಾರುಕಟ್ಟೆಗೆ ನೀರಿಕ್ಷಿತ ಪ್ರಮಾಣದಲ್ಲಿ ಮೆಣಸಿನಕಾಯಿಗಳು ಚೀಲಗಳು ಬಂದಿರಲಿಲ್ಲ. ಪ್ರತಿ ವರ್ಷ ಡಿಸೆಂಬರ್‌ನಿಂದ ಮಾರ್ಚ್ ವೇಳೆಗೆ ಲಕ್ಷಾಂತರ ಚೀಲಗಳಿಂದ ತುಂಬಿರುವ ಮಾರುಕಟ್ಟೆ ಈ ಬಾರಿ ಮೆಣಸಿನಕಾಯಿ ಇಲ್ಲದೇ ಬಣಗುಡುತ್ತಿತ್ತು. ಕಾರಣ, ಕಳೆದ ವರ್ಷ ಮೆಣಸಿನಕಾಯಿಗೆ ಸೂಕ್ತ ದರ ಸಿಗದ ಹಿನ್ನೆಲೆಯಲ್ಲಿ ರೈತರು ನಷ್ಟ ಅನುಭವಿಸಿದ್ದರು. ಹೀಗಾಗಿ ಈ ವರ್ಷ ರೈತರು ಕಡಿಮೆ ಪ್ರಮಾಣದಲ್ಲಿ ಬೆಳೆ ಬೆಳೆದಿದ್ದಾರೆ. ಮೆಣಸಿನಕಾಯಿ ಬದಲಾಗಿ ಬೇರೆ ಬೇರೆ ವಾಣಿಜ್ಯ ಬೆಳೆಗಳನ್ನು ಹೆಚ್ಚಾಗಿ ಬೆಳೆದಿದ್ದಾರೆ. ಹೀಗಾಗಿ ಮೆಣಸಿನಕಾಯಿ ಪೂರೈಕೆ ಕೊರತೆ ಉಂಟಾಗಿದೆ. ಪೂರೈಕೆ ಕಡಿಮೆಯಾಗುತ್ತಿದ್ದಂತೆ ಬೇಡಿಕೆ ಮತ್ತು ಬೆಲೆಯೂ ಕೂಡ ಏರಿಕೆಯಾಗಿದೆ'' ಎಂದು ಹೇಳಿದರು.

ಕಳೆದ 2021ರಿಂದ ದರ ನೋಡುವುದಾದರೆ ಪ್ರತಿ ಕ್ವಿಂಟಲ್ ಬ್ಯಾಡಗಿ ಮೆಣಸಿನಕಾಯಿಗೆ 36,000 ರೂಪಾಯಿ, 2022ರಲ್ಲಿ 50,000-70,000 ರೂಪಾಯಿ, 2023ರಲ್ಲಿ 35,000-44,000 ರೂಪಾಯಿ, 2024ರಲ್ಲಿ 30,000 ರಿಂದ 40,000 ರೂಪಾಯಿ ಹಾಗೂ 2025ರಲ್ಲಿ 35,000 ರೂಪಾಯಿ ಇತ್ತು. ಈ ಬಾರಿ ಬರೋಬ್ಬರಿ 90,000 ರೂಪಾಯಿಗೆ ಒಂದು ಕ್ವಿಂಟಲ್ ಮೆಣಸಿನಕಾಯಿ ಮಾರಾಟವಾಗಿದೆ.

ಬ್ಯಾಡಗಿ ಮೆಣಸಿನಕಾಯಿಯ ಇತಿಹಾಸ

ರಾಜ್ಯದ ಹಾವೇರಿ ಜಿಲ್ಲೆಯ ಬ್ಯಾಡಗಿ ಪಟ್ಟಣದಿಂದ ಹುಟ್ಟಿದ ಬ್ಯಾಡಗಿ ಮೆಣಸಿನಕಾಯಿ ಇಂದು ಜಗತ್ತಿನಾದ್ಯಂತ ಖ್ಯಾತಿ ಪಡೆದಿದೆ. ಆಳವಾದ ಕೆಂಪು ಬಣ್ಣ, ಸೌಮ್ಯ ಖಾರ ಮತ್ತು ಅಪೂರ್ವ ಪರಿಮಳಕ್ಕೆ ಹೆಸರಾದ ಈ ಮೆಣಸಿನಕಾಯಿ 2011ರ ಫೆಬ್ರವರಿಯಲ್ಲಿ ಭೌಗೋಳಿಕ ಸೂಚನೆ() ಟ್ಯಾಗ್ ಪಡೆದು ಸಂಖ್ಯೆ 126ರೊಂದಿಗೆ ಕರ್ನಾಟಕದ ಕೃಷಿ ವೈಭವಕ್ಕೆ ಮತ್ತೊಂದು ರತ್ನ ಸೇರಿಸಿತು. ಹಾವೇರಿ, ಗದಗ ಮತ್ತು ಧಾರವಾಡ ಜಿಲ್ಲೆಗಳಲ್ಲಿ ಮುಖ್ಯವಾಗಿ ಬೆಳೆಯುವ ಈ ತಳಿಯು ಭಾರತೀಯ ಅಡುಗೆಯಲ್ಲಿ ಮಾತ್ರವಲ್ಲದೆ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿಯೂ ಬಣ್ಣದ ಬೆಡಗಿಯಾಗಿ ಕಂಗೊಳಿಸುತ್ತಿದೆ.

ಬ್ಯಾಡಗಿ ಮೆಣಸಿನಕಾಯಿಯ ಇತಿಹಾಸ 17ನೇ ಶತಮಾನದ ಪೋರ್ಚುಗೀಸ್ ಪರಿಚಯದಿಂದ ಆರಂಭವಾಗುತ್ತದೆಂದು ನಂಬಲಾಗಿದೆ. ಬ್ರಿಟಿಷ್ ಕಾಲದಿಂದಲೇ ಇದರ ಆಳವಾದ ಕೆಂಪು ಬಣ್ಣಕ್ಕೆ ಜಗತ್ತಿನ ಗಮನ ಸೆಳೆಯಿತು. ಬ್ಯಾಡಗಿ ಪ್ರದೇಶವು ಒಂದು ಕಾಲದಲ್ಲಿ ಭಾರತದ ಅತಿದೊಡ್ಡ ಮೆಣಸು ವ್ಯಾಪಾರ ಕೇಂದ್ರವಾಗಿ ಹೊರಹೊಮ್ಮಿತ್ತು. ಇದರಲ್ಲಿ ಡಬ್ಬಿ(ಗುಂಡು, ಬೀಜ ಹೆಚ್ಚು) ಮತ್ತು ಕಡ್ಡಿ (ತೆಳು, ಉದ್ದ, ಬೀಜ ಕಡಿಮೆ) ಎಂಬ ಎರಡು ಪ್ರಮುಖ ತಳಿಗಳು ಟ್ಯಾಗ್ ಪಡೆದಿವೆ. ಇವುಗಳಲ್ಲಿ ಡಬ್ಬಿ ತಳಿಯು ಬಣ್ಣದ ಮೌಲ್ಯಕ್ಕೆ ಹೆಚ್ಚು ಪ್ರಸಿದ್ಧವಾಗಿದೆ.

ಬ್ಯಾಡಗಿ ಮೆಣಸಿನ ವಿಶೇಷತೆಯೇ ಅದರ ಸೌಮ್ಯ ಕಟುತ್ವ(5000ದಿಂದ 15,000) ಮತ್ತು ಅತ್ಯುತ್ತಮ ಬಣ್ಣ ಮೌಲ್ಯ( 150-250 ಯುನಿಟ್). ಇದು ಪಾಪ್ರಿಕಾ ಪುಡಿಯಂತೆ ಬಳಸಲು ಸೂಕ್ತವಾಗಿದೆ. ಖಾರ ಕಡಿಮೆ ಇರುವುದರಿಂದ ಮಕ್ಕಳು, ವೃದ್ಧರು ಮತ್ತು ಆರೋಗ್ಯದ ಬಗ್ಗೆ ಕಾಳಜಿ ವಹಿಸುವವರ ಆದರ್ಶ ಆಯ್ಕೆಯಾಗಿದೆ. ಇದರಲ್ಲಿ ಕ್ಯಾಪ್ಸಾಂಥಿನ್, ಕ್ಯಾಪ್ಸೋರುಬಿನ್ ಎಂಬ ಕ್ಯಾರೋಟಿನಾಯ್ಡ್ ವರ್ಣದ್ರವ್ಯಗಳು ಹೇರಳವಾಗಿರುವುದರಿಂದ ಆಹಾರದ ಬಣ್ಣವನ್ನು ಸಹಜವಾಗಿ ಹೆಚ್ಚಿಸುತ್ತದೆ.

ಬ್ಯಾಡಗಿ ಮೆಣಸಿನಕಾಯಿಯ ಉಪಯೋಗಗಳು

ಬ್ಯಾಡಗಿ ಮೆಣಸಿನಿಂದ ತಯಾರಾಗುವ ಉತ್ಪನ್ನಗಳು ವೈವಿಧ್ಯಪೂರ್ಣವಾಗಿವೆ. ಒಣ ಮೆಣಸು(ಕಡ್ಡಿ ಮತ್ತು ಡಬ್ಬಿ ವಿಧ), ಬಣ್ಣದ ಪುಡಿ, ಚಿಲ್ಲಿ ಫ್ಲೇಕ್ಸ್, ಚಟ್ನಿ ಪೇಸ್ಟ್ ಮತ್ತು ಮುಖ್ಯವಾಗಿ ಒಲಿಯೋರೆಸಿನ್(ಎಣ್ಣೆ ರೂಪದ ಸಾರ). ಈ ಒಲಿಯೋರೆಸಿನ್‌ನನ್ನು ಆಹಾರ, ಕಾಸ್ಮೆಟಿಕ್ಸ್(ಲಿಪ್‌ಸ್ಟಿಕ್, ನೈಲ್ ಪಾಲಿಷ್), ಔಷಧಿ, ಪಶುಆಹಾರ ಮತ್ತು ಟೆಕ್ಸ್‌ಟೈಲ್ ಉದ್ಯಮಗಳಲ್ಲಿ ಬಣ್ಣವಾಗಿ ಬಳಸುತ್ತಾರೆ. ಒಂದು ಟನ್ ಒಣ ಮೆಣಸಿನಿಂದ ಸುಮಾರು 50 ಲೀಟರ್ ಒಲಿಯೋರೆಸಿನ್ ತಯಾರಾಗುತ್ತದೆ. ಕೇರಳದಲ್ಲಿ ಶುದ್ಧೀಕರಣಗೊಂಡು ಅಮೆರಿಕಾ, ಯುರೋಪ್, ಜಪಾನ್, ಚೀನಾ ಸೇರಿದಂತೆ ಹಲವು ದೇಶಗಳಿಗೆ ರಫ್ತಾಗುತ್ತದೆ.

2026ರ ಫೆಬ್ರವರಿಯಲ್ಲಿ ಬ್ಯಾಡಗಿ ಮಾರುಕಟ್ಟೆಯಲ್ಲಿ ಇತಿಹಾಸ ಸೃಷ್ಟಿಯಾಗಿದ್ದು, ಡಬ್ಬಿ ತಳಿಯ ಒಣ ಮೆಣಸು ಕ್ವಿಂಟಲ್‌ಗೆ 86,999 ರೂ.ಗೆ ತಲುಪಿದೆ. ಕಡ್ಡಿ ತಳಿ 69,999 ರೂ. ದಾಖಲೆ ಬೆಲೆಯನ್ನು ದಾಟಿದೆ. ರೈತರಿಗೆ ಇದು ಸಂತಸದ ಸುದ್ದಿಯಾಗಿದ್ದರೆ, ಉದ್ಯಮಿಗಳಿಗೆ ಅಂತಾರಾಷ್ಟ್ರೀಯ ಬೇಡಿಕೆಯ ಪ್ರತಿಫಲವಾಗಿದೆ. ಆಚಿ, ಎಂಟರ್ಆರ್ಕ ಆಶೀರ್ವಾದ್, ಸಮೃತಿ, ರಾಣಿ, ಎಂಡಿಎಚ್ ಸೇರಿದಂತೆ ಹಲವು ಬ್ರ್ಯಾಂಡ್‌ಗಳು ಬ್ಯಾಡಗಿ ಮೆಣಸು ಪುಡಿಯನ್ನು ತಮ್ಮ ಉತ್ಪನ್ನಗಳಲ್ಲಿ ಬಳಸುತ್ತವೆ.

ಅಡುಗೆಯಲ್ಲಿ ಬ್ಯಾಡಗಿ ಮೆಣಸು ಸಾಂಬಾರ್, ರಸಂ, ಬಿಸಿಬೇಳೆಬಾತ್, ಪಿಕಲ್, ಗ್ರೇವಿ ಮತ್ತು ಮಸಾಲೆಗಳಿಗೆ ಸುಂದರ ಕೆಂಪು ಬಣ್ಣ ಮತ್ತು ಸೌಮ್ಯ ರುಚಿ ನೀಡುತ್ತದೆ. ಬ್ಯಾಡಗಿ ಮೆಣಸಿನಕಾಯಿ ಕೇವಲ ಒಂದು ಪದಾರ್ಥವಲ್ಲ, ಕರ್ನಾಟಕದ ರೈತರ ಶ್ರಮ, ಸಂಸ್ಕೃತಿ ಮತ್ತು ಆರ್ಥಿಕ ಸಬಲೀಕರಣದ ಸಂಕೇತ. ಟ್ಯಾಗ್‌ನೊಂದಿಗೆ ಇದರ ಗುಣಮಟ್ಟ ರಕ್ಷಣೆಗೊಂಡಿದ್ದು, ಭವಿಷ್ಯದಲ್ಲಿ ಮತ್ತಷ್ಟು ಮೌಲ್ಯವರ್ಧನೆಯ ಅವಕಾಶಗಳು ತೆರೆದುಕೊಂಡಿವೆ.



## ಜೆ ಜೆ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ

ಜಾಲಹಳ್ಳಿ,ಫೆ.20-

ಗ್ರಾಮದ ಜೆ ಜೆ ಪ್ರಾಥಮಿಕ ಹಾಗೂ ಪ್ರೌಢ ಶಾಲೆ ಆವರಣದಲ್ಲಿ ಶಾಲಾ ವಾರ್ಷಿಕೋತ್ಸವ ಹಾಗೂ ಬೀಳ್ಕೊಡುಗೆ ಸಮಾರಂಭ ಕಾರ್ಯಕ್ರಮ ಗುರುವಾರ ಸಂಜೆ ಜರುಗಿತು,

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಪಂ ಅಧ್ಯಕ್ಷೆ ವಿಜಯಲಕ್ಷ್ಮೀ ತೋಟದ್ ಅವರು ವಹಿಸಿದ್ದರು,

ಕಾರ್ಯಕ್ರಮದ ಮಹಾ ಸಾನಿಧ್ಯವನ್ನು ಪರಮಪೂಜ್ಯ ಶ್ರೀ ಷ. ಬ್ರ ವಿದ್ಯಾಮಾನ್ಯ ಶಿವಾಭಿನವ ಜಯಶಾಂತಲಿಂಗೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಬೃಹನ್ಮಠ ಜಾಲಹಳ್ಳಿ ಅವರು ವಹಿಸಿದ್ದರು,

ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮವನ್ನು ನೋಡಲು ಕಿಕ್ಕಿರಿದು ಜನ ಆಗಮಿಸಿತು,

ಇದೆ ಸಂದರ್ಭದಲ್ಲಿ ಸಿಆರ್ ಪಿ ಸೋಮಶೇಖರ್ ದೊರೆ, ವೀರಣ್ಣ ಪಾಣಿ ಸಾಹು ಉಪಾಧ್ಯಕ್ಷರು ಶ್ರೀ ಜೆ.ಜೆ. ಶಿಕ್ಷಣ ಸಂಸ್ಥೆ,ವೀರಣ್ಣ ಬಳೆ ಕಾರ್ಯದರ್ಶಿಗಳು ಜೆ.ಜೆ. ಶಿಕ್ಷಣ ಸಂಸ್ಥೆ ,ಭೀಮಣ್ಣ ನಾಡಗೌಡ ಚಿಂಚೋಡಿ ,ರಾಮನಗೌಡ ವಿ. ಮಾಲಿಪಾಟೀಲ,ಸಂಜೀವರೆಡ್ಡಿ ಬಿ. ಮಾಡಬಾಳ, ಭೀಮನಗೌಡ ಲಿಂಗದಹಳ್ಳಿ, ಗುರುಸ್ವಾಮಿ, ಶಿಕ್ಷಕರಾದ ಶಿವನಗೌಡ ಪಾಟೀಲ, ದಂಡನಗೌಡ ಪಾಟೀಲ್, ಮಾರುತಿ ರಾವ್ ಕುಲಕರ್ಣಿ, ಗುಡ್ಡಪ್ಪ, ವಿಜಯಲಕ್ಷ್ಮಿ, ನಿಂಗಯ್ಯ ಹೊಸೂರು, ಮುತ್ತಿನ, ಮತ್ತು ಗ್ರಾಮಸ್ಥರು ಯುವಕರು, ವಿವಿಧ ಸಂಘ ಸಂಸ್ಥೆಗಳ ಮುಖಂಡರು ಭಾಗವಹಿಸಿದ್ದರು,

## ಎಮ್ ಇಂಗ್ಲಿಷ್ ಮಾಧ್ಯಮ ಪೂರ್ವ ಪ್ರಾಥಮಿಕ ಶಾಲೆಯಲ್ಲಿ 3 ನೇ ವರ್ಷದ ವಾರ್ಷಿಕೋತ್ಸವ




ಕವಿತಾಳ : ಖಾಸಗಿ ಶಾಲೆ ಸಂಸ್ಥೆಗಳು ನಡೆಸುವುದು ಹಳೆಯ ಲಾರಿ ನಡಿಸಿದಂತೆ ಆರ್ಥಿಕವಾಗಿ ಧನ ಇರುವಂತಹ ವ್ಯಕ್ತಿಗಳು ಶಾಲೆ ಕಟ್ಟುವುದಕ್ಕೆ ಮುಂದೆ ಬರುತ್ತಿಲ್ಲ ಎಂದು ರಾಯಚೂರು ಖಾಸಗಿ ಶಾಲೆಯ ಮುಖ್ಯಸ್ಥ ರವಿಕುಮಾರ್ ಹೇಳಿದರು ಇಲ್ಲಿನ ಎಮ್ ಇಂಗ್ಲಿಷ್ ಮಾಧ್ಯಮ ಪೂರ್ವ ಪ್ರಾಥಮಿಕ ಶಾಲೆಯಲ್ಲಿ 3 ನೇ ವರ್ಷದ ವಾರ್ಷಿಕೋತ್ಸವದ ಕಾರ್ಯಕ್ರಮ ಉದ್ಘಾಟನೆ ಮಾಡಿ ಅವರು ಮಾತನಾಡಿರು. ಈ ತಾಂತ್ರಿಕ ಯುಗದಲ್ಲಿ ಮಕ್ಕಳಲ್ಲಿ ಶಿಕ್ಷಣದ ಜೊತೆಗೆ ಸಂಸ್ಕಾರ ಕಲಿಸುವುದು ಅತಿ ಮುಖ್ಯ. ಒಂದು ಶಾಲೆ ಕಟ್ಟುವುದರಿಂದ 10 ಮಂದಿರಗಳಿಗೆ ಸಮ. ಪ್ರತಿಯೊಬ್ಬರು ಮನೆಯ ಮುಂದೆ ಗಿಡಗಳನ್ನು ನೆಟ್ಟು ಮಿತವಾಗಿ ನೀರನ್ನು ಬಳಸಬೇಕು ಎಂದರು.

ಬಲವಂತರಾಯ ಗೌಡ ವಟಗಲ ಮಾತನಾಡಿ ಪಾಲಕರು ಶಿಕ್ಷಕರು ಸಂಸ್ಥಾಪಕರು ಕೈಜೋಡಿಸಿದಾಗ ಮಾತ್ರ ಸಂಸ್ಥೆಗಳು ಬೆಳೆಯಲು ಸಾಧ್ಯವಾಗುತ್ತದೆ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಸಹಕಾರಿ ಯಾಗುತ್ತದೆ. ಶಿಕ್ಷಣ ಎನ್ನುವುದು ಹುಲಿ ಹಾಲಿನಂತೆ ಕುಡಿದವರು ಘರ್ಜಿಸುತ್ತಾರೆ. ಪಟ್ಟಣದ ಖಾಸಗಿ ಶಾಲೆಗಳ ಸಹಕಾರಕ್ಕೆ ಸದಾ ಕಾಲ ಇರುತ್ತೇವೆ ಎಂದರು.

ಮಾಡೆಲ್ ಶಾಲೆಯ ಅಧ್ಯಕ್ಷ ಬಿ ಎ. ಕರೀಂ ಸಾಬ್, ತಿಮ್ಮಣ್ಣ ಕಾರ್ಯಕ್ರಮ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಶಾಲೆ ಸಂಸ್ಥಾಪಕಿ ಸುಮಿತಾ ರಮೇಶ ಸಾನಬಾಳ, ವರದಿಗಾರ ಸಂಘದ ತಾಲೂಕು ಉಪಾಧ್ಯಕ್ಷ ಗಂಗಪ್ಪ ದಿನ್ನಿ, ವಿಜಯ ಭಾಸ್ಕರ ಕೋಸ್ಗಿ, ಇಮ್ರಾನ್ ರಾಯಚೂರು, ರಮೇಶ ಸಾನಬಾಳ, ವೆಂಕಟೇಶ, ಹನುಮಂತ್ರಯ, ಏಮ್ ಪೂರ್ವ ಪ್ರಾಥಮಿಕ ಶಾಲೆಯ ಸಹ ಶಿಕ್ಷಕಿಯರಾದ ಉಮಾ, ಸುಧಾ, ಸುರೇಖಾ, ಶಾಂತಮ್ಮ, ಜ್ಯೋತಿ, ರತ್ನಮ್ಮ, ರೂಪ, ಪವಿತ್ರ, ಉಮಾದೇವಿ, ದೇವಮ್ಮ ಮತ್ತು ಪಾಲಕರು ಹಾಗೂ ಮಕ್ಕಳು ಇದ್ದರು.

ಮಕ್ಕಳ ಸಾಂಸ್ಕೃತಿಕ ಜೊತೆಗೆ ಪಾಲಕರ ನೃತ್ಯ ಕಾರ್ಯಕ್ರಮಗಳು ನೋಡದರ ಗಮನ ಸೆಳೆದವು.

ಈರಪ್ಪ ಮಲ್ಲಪ್ಪ ಐಕೂರ್ ಎಜುಕೇಶನಲ್ ಅಂಡ್ ಚಾರಿಟೇಬಲ್ ಟ್ರಸ್ಟ್ ಅಡಿಯಲ್ಲಿ

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR